ಸಂಪುಟ: 11 ಸಂಚಿಕೆ: 176 ಪುಟ: 4+2 ಬೆಲೆ : 3.00 ಭಾನುವಾರ, ಆಗಸ್ಟ್ 16, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 176 Pages : 4+2 Rate : 3.00 Sunday, August 16, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

### ರಾಜಕೀಯ ಸಂಸ್ಕೃತಿಯಲ್ಲಿ ಬದಲಾವಣೆ ಅಗತ್ಯ | ಜನಸೇವೆಯೇ ನಿಜವಾದ ನಾಯಕತ್ವದ ಮಾನದಂಡ: ಅನಿಲ್ ಲಾಲ್ ಬಹದ್ದೂರ್ ಶಾಸ್ತ್ರಿ

# ನೈತಿಕ ಹೊಣೆಗಾರಿಕೆ ಸ್ವೀಕರಿಸುವ ಪರಿಪಾಠ ಬೆಳೆಯಲಿ



**ವಿಜಯಸಾಕ್ಷಿ ಸುದ್ದಿ, ಗದಗ**

ಸಾರ್ವಜನಿಕ ಜೀವನದಲ್ಲಿ ನೈತಿಕ ಹೊಣೆಗಾರಿಕೆ ಸ್ವೀಕರಿಸುವ ಪರಿಪಾಠ ಹಿಂದಿನ ದಿನಗಳಲ್ಲಿತ್ತು. ಆದರೆ ಇಂದು ತಪ್ಪಿನ ಹೊಣೆ ಹೊತ್ತು ರಾಜೀನಾಮೆ ನೀಡಬೇಕೆಂದು ಒತ್ತಾಯಿಸಿ ಪ್ರತಿಭಟನೆ ನಡೆಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಇದು ಬದಲಾಗಿರುವ ರಾಜಕೀಯ ಸಂಸ್ಕೃತಿಯ ಪ್ರತೀಕವಾಗಿದೆ ಎಂದು ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಪುತ್ರ ಅನಿಲ್ ಲಾಲ್ ಬಹದ್ದೂರ್ ಶಾಸ್ತ್ರಿ ವಿಷಾದಿಸಿದರು.

ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಜಿಲ್ಲಾ ಕಾಂಗ್ರೆಸ್ ಕಚೇರಿ ಸಭಾಂಗಣದಲ್ಲಿ ಶನಿವಾರ ಎಚ್.ಕೆ. ಪಾಟೀಲ ಸೇವಾ ತಂಡ ಆಯೋಜಿಸಿದ್ದ ನಿಮ್ಮ ಸೇವೆಗೆ ಅವಕಾಶ ಕೊಡಿ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ತಮ್ಮ ತಂದೆ ಲಾಲ್ ಬಹದ್ದೂರ್ ಶಾಸ್ತ್ರಿ ರೈಲ್ವೆ ಸಚಿವರಾಗಿದ್ದ ಸಂದರ್ಭದಲ್ಲಿ ರೈಲು ಅಪಘಾತ ಸಂಭವಿಸಿದಾಗ, ರೈಲನ್ನು ತಾವು ಚಲಾಯಿಸದಿದ್ದರೂ ಸಚಿವರಾಗಿ ಘಟನೆಯ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಿದ್ದರು. ಆಗ ರಾಜೀನಾಮೆಗಾಗಿ ಯಾರೂ ಪ್ರತಿಭಟನೆ ನಡೆಸಬೇಕಾದ ಅಗತ್ಯವಿರಲಿಲ್ಲ. ಆದರೆ ಇಂದಿನ ಪರಿಸ್ಥಿತಿಯಲ್ಲಿ ಅದಕ್ಕಾಗಿ ವಿದ್ಯಾರ್ಥಿಗಳು ಬೀದಿಗಿಳಿಯಬೇಕಾದ ಸ್ಥಿತಿ ಬಂದಿದೆ ಎಂದರು.

ಹೇಳುವುದಕ್ಕೂ ಮಾಡುವುದಕ್ಕೂ ಇರುವ ಅಂತರ ಇಂದಿನ ವ್ಯವಸ್ಥೆಯಲ್ಲಿ ಹೆಚ್ಚಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಜನರಿಗೆ ವಿದೇಶ ಪ್ರವಾಸ ಮಾಡದಂತೆ ಕರೆ ನೀಡಿದರೂ ತಾವೇ ವಿದೇಶ ಪ್ರವಾಸ ಕೈಗೊಂಡಿದ್ದಾರೆ. ಸಾರ್ವಜನಿಕ ಜೀವನದಲ್ಲಿ ಮಾತು ಮತ್ತು ಕೃತ್ಯಗಳ ನಡುವೆ ಹೊಂದಾಣಿಕೆ ಇರಬೇಕು ಎಂದು ಅವರು ಹೇಳಿದರು.

ಎಚ್.ಕೆ. ಪಾಟೀಲ ಸೇವಾ ತಂಡವು 11 ಸಾವಿರ ಕುಟುಂಬಗಳನ್ನು ದತ್ತು ಪಡೆದು, 23ಕ್ಕೂ ಹೆಚ್ಚು ಜನಪರ ಸೇವೆಗಳನ್ನು ಮನೆ ಬಾಗಿಲಿಗೆ ತಲುಪಿಸಲು ಮುಂದಾಗಿರುವುದು ದೇಶದಲ್ಲೇ ಅಪರೂಪದ ಸಾಮಾಜಿಕ ಸೇವಾ ಕಾರ್ಯ ಎಂದು ಅನಿಲ್ ಶಾಸ್ತ್ರಿ ಶ್ಲಾಘಿಸಿದರು.

ಜನಪ್ರತಿನಿಧಿಯಾಗಿ ಆಯ್ಕೆಯಾದ ಬಳಿಕ ಜನರಿಂದ ದೂರವಾಗುವವರ ನಡುವೆ ಎಚ್.ಕೆ. ಪಾಟೀಲ ಅವರು ನಿರಂತರವಾಗಿ ಜನರೊಂದಿಗೆ ಸಂಪರ್ಕದಲ್ಲಿದ್ದು, ಅವರ ಕಲ್ಯಾಣಕ್ಕಾಗಿ ಕೆಲಸ ಮಾಡುತ್ತಿರುವುದು ಮಾದರಿಯಾಗಿದೆ. ಕಳೆದ 20 ವರ್ಷಗಳಿಂದ ಎಚ್.ಕೆ. ಪಾಟೀಲ ಅವರ ಜನಸೇವೆಯನ್ನು ಗಮನಿಸುತ್ತಿದ್ದು, ಅವರ ಬದ್ಧತೆ, ಪ್ರಾಮಾಣಿಕತೆ ಹಾಗೂ ಸಮರ್ಪಣೆಯಲ್ಲಿ ಯಾವುದೇ ಬದಲಾವಣೆಯಾಗಿಲ್ಲ ಎಂದರು.

ಕೆ.ಎಚ್. ಪಾಟೀಲ ಅವರು ಹಾಕಿಕೊಟ್ಟ ಜನಸೇವೆ ಮತ್ತು ಅಭಿವೃದ್ಧಿಯ ಪರಂಪರೆಯನ್ನು ಮುಂದುವರಿಸಿಕೊಂಡು ಹೋಗುತ್ತಿರುವುದು ಸಂತಸದ ಸಂಗತಿ. 73ನೇ ಜನ್ಮದಿನ ಆಚರಿಸಿಕೊಳ್ಳುತ್ತಿರುವ ಎಚ್.ಕೆ. ಪಾಟೀಲ ಅವರಿಗೆ ಶುಭಾಶಯ ಕೋರಿದ ಅವರು, ಗದಗ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕವಾಗಿ ಮತ್ತಷ್ಟು ಅಭಿವೃದ್ಧಿ ಹೊಂದಲಿ ಎಂದು ಹಾರೈಸಿದರು.

**ಸೇವೆಗೆ 577 ಕ್ಯಾಪ್ಟನ್‌ಗಳ ಪಡೆ**

ಸೇವಾ ತಂಡದ ಅಧ್ಯಕ್ಷ ಪ್ರಭು ಬುರಬುರೆ ಮಾತನಾಡಿ, ಗದಗ ಜಿಲ್ಲೆಯನ್ನು ಅಂಗಾಂಗ ದಾನ ನೋಂದಣಿಯಲ್ಲಿ ರಾಜ್ಯದಲ್ಲೇ ಮೊದಲ ಸ್ಥಾನಕ್ಕೆ ಕೊಂಡೊಯ್ಯುವ ಗುರಿಯೊಂದಿಗೆ ತಂಡ ಕಾರ್ಯನಿರ್ವಹಿಸುತ್ತಿದೆ ಎಂದರು.

ಅಂಗಾಂಗ ದಾನ ನೋಂದಣಿಯಲ್ಲಿ ಹಿಂದೆ ಗದಗ ಜಿಲ್ಲೆ 21ನೇ ಸ್ಥಾನದಲ್ಲಿತ್ತು. ಸೇವಾ ತಂಡದ ಸಂಘಟಿತ ಪ್ರಯತ್ನದಿಂದ ಇದೀಗ ಮೂರನೇ ಸ್ಥಾನಕ್ಕೆ ಏರಿದೆ. ಅಕ್ಟೋಬರ್ 2ರ ವೇಳೆಗೆ ರಾಜ್ಯದಲ್ಲೇ ಪ್ರಥಮ ಸ್ಥಾನಕ್ಕೇರಿಸುವ ಗುರಿ ಹೊಂದಿದ್ದು, ಅದಕ್ಕಾಗಿ ನಿರಂತರವಾಗಿ ಕಾರ್ಯನಿರ್ವಹಿಸಲಾಗುತ್ತಿದೆ ಎಂದು ತಿಳಿಸಿದರು.

ಸೇವಾ ತಂಡದಿಂದ ಒಟ್ಟು 11 ಸಾವಿರ ಮನೆಗಳನ್ನು ದತ್ತು ಪಡೆಯಲಾಗಿದೆ. ತಂಡದಲ್ಲಿ 577 ಕ್ಯಾಪ್ಟನ್‌ಗಳು ಕಾರ್ಯನಿರ್ವಹಿಸುತ್ತಿದ್ದು, ಈಗಾಗಲೇ 283 ಕ್ಯಾಪ್ಟನ್‌ಗಳಿಗೆ ತಲಾ 50 ಮನೆಗಳ ಜವಾಬ್ದಾರಿ ವಹಿಸಲಾಗಿದೆ. ಅಗತ್ಯವಿರುವ ಕುಟುಂಬಗಳಿಗೆ 23ಕ್ಕೂ ಹೆಚ್ಚು ಸೇವೆಗಳನ್ನು ನೇರವಾಗಿ ಮನೆ ಬಾಗಿಲಿಗೆ ತಲುಪಿಸಲು ತಂಡ ಸಜ್ಜಾಗಿದೆ ಎಂದರು.

ಸೇವಾ ಕಾರ್ಯಗಳಲ್ಲಿ ಸಂಪೂರ್ಣ ಪಾರದರ್ಶಕತೆ ಕಾಯ್ದುಕೊಳ್ಳಲು ನೂತನ ವೆಬ್‌ಸೈಟ್ ಸಿದ್ಧಪಡಿಸಲಾಗಿದ್ದು, ಶೀಘ್ರದಲ್ಲೇ ಲೋಕಾರ್ಪಣೆಗೊಳ್ಳಲಿದೆ ಎಂದು ಹೇಳಿದರು.

**ಜನಸೇವೆಯೇ ತಂಡದ ಗುರಿ**

ಶಾಸಕ ಎಚ್.ಕೆ. ಪಾಟೀಲ ಮಾತನಾಡಿ, ಸೇವಾ ತಂಡದ ಯಶಸ್ಸು ಕ್ಯಾಪ್ಟನ್‌ಗಳ ಕಲ್ಪನೆ, ಬದ್ಧತೆ ಹಾಗೂ ಕಾರ್ಯನಿರ್ವಹಣೆಯ ಮೇಲೆ ಅವಲಂಬಿತವಾಗಿದೆ. ನಾವೆಲ್ಲರೂ ರಾಜಕೀಯ ಕಾರ್ಯಕರ್ತರು ಎಂಬುದನ್ನು ಅರಿತುಕೊಂಡು ನಾಯಕರನ್ನು ಬಲಪಡಿಸುವ ಮೂಲಕ ಜನಸೇವೆ ಮಾಡಲು ಸಿದ್ಧರಾಗಬೇಕು ಎಂದರು.

ಸೇವೆ ಮಾಡಬೇಕೆಂಬ ಮನೋಭಾವ ಹೊಂದಿರುವವರು ತಂಡದೊಂದಿಗೆ ಇದ್ದಾರೆ. ಸೇವೆಯ ಅಗತ್ಯವಿರುವವರು ನಮ್ಮ ನಡುವೆ ಸಾಕಷ್ಟು ಸಂಖ್ಯೆಯಲ್ಲಿದ್ದಾರೆ. ಅಂತಹವರ ನೆರವಿಗೆ ಸೇವಾ ತಂಡ ಸದಾ ಸಿದ್ಧವಿದೆ. ಕೊರೊನಾ ಸಂದರ್ಭದಲ್ಲಿ ನಿರಂತರವಾಗಿ ಜನಪರ ಕಾರ್ಯಗಳನ್ನು ಕೈಗೊಂಡಿದ್ದು, ಮುಂದೆಯೂ ಸೇವಾ ಕಾರ್ಯವನ್ನು ಮತ್ತಷ್ಟು ವಿಸ್ತರಿಸಲಾಗುವುದು ಎಂದು ಹೇಳಿದರು.

ಜಿಲ್ಲಾ ಯುವ ಕಾಂಗ್ರೆಸ್ ಘಟಕದ ಅಧ್ಯಕ್ಷ ಕೆ.ಎಚ್. ಪಾಟೀಲ ಅವರು ಸೇವಾ ತಂಡದಿಂದ ಲಭ್ಯವಿರುವ 23 ಸೇವೆಗಳ ವಿವರ ಹಾಗೂ ವೆಬ್‌ಸೈಟ್ ಕಾರ್ಯವೈಖರಿಯನ್ನು ಪರಿಚಯಿಸಿದರು. ಶಾಸಕ ಎಚ್.ಕೆ. ಪಾಟೀಲ ಅವರು ಸೇವಾ ತಂಡದ ಕ್ಯಾಪ್ಟನ್‌ಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು.

ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿದ್ದ ಅನಿಲ್ ಲಾಲ್ ಬಹದ್ದೂರ್ ಶಾಸ್ತ್ರಿ ಅವರನ್ನು ಸೇವಾ ತಂಡದ ವತಿಯಿಂದ ನಂದಿ ವಿಗ್ರಹ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಶಾಸಕ ಎನ್.ಎಚ್. ಕೋನರೆಡ್ಡಿ, ಮಾಜಿ ಶಾಸಕ ಡಿ.ಆರ್. ಪಾಟೀಲ, ಎ.ಎಂ. ಹಿಂಡಸಗೇರಿ, ವಾಸಣ್ಣ ಕುರುಡಗಿ, ನೀಲಮ್ಮ ಬೋಳನವರ, ಸಿದ್ಧಲಿಂಗೇಶ್ವರ ಪಾಟೀಲ, ಬಸವರಾಜ ಕಡೇಮನಿ, ಗುರಣ್ಣ ಬಳಗಾನೂರ, ಬಸವರಾಜ ಸುಂಕಾಪುರ, ಅಕ್ಬರಸಾಬ ಬಬರ್ಚಿ, ಕೊಟ್ರೇಶಪ್ಪ ಬಸೆಗಣ್ಣಿ, ಎಂ.ಸಿ. ಶೇಖ್, ಬರ್ಕತಲಿ ಮುಲ್ಲಾ, ಆನಂದಯ್ಯಸ್ವಾಮಿ ಗಡ್ಡದೇವರಮಠ ಸೇರಿದಂತೆ ಹಲವು ಮುಖಂಡರು, ಸೇವಾ ತಂಡದ ಕ್ಯಾಪ್ಟನ್‌ಗಳು ಹಾಗೂ ಕೋಆರ್ಡಿನೇಟರ್‌ಗಳು ಉಪಸ್ಥಿತರಿದ್ದರು. ಬಿ.ಬಿ. ಅಸೂಟಿ ಸ್ವಾಗತಿಸಿದರು.

> **ಲಾಲ್ ಬಹದ್ದೂರ್ ಶಾಸ್ತ್ರಿ ಅವರು ರೈಲ್ವೆ ಸಚಿವರಾಗಿದ್ದಾಗ ನಡೆದ ರೈಲು ಅಪಘಾತದ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಿದ್ದರು. ರೈಲನ್ನು ಅವರು ಚಲಾಯಿಸಿರಲಿಲ್ಲ. ಆದರೂ ಸಚಿವರಾಗಿ ಹೊಣೆ ಹೊತ್ತು ರಾಜೀನಾಮೆ ನೀಡಿದ್ದರು. ಆಗ ಯಾರೂ ಪ್ರತಿಭಟನೆ ಮಾಡಬೇಕಾಗಿರಲಿಲ್ಲ. ಆದರೆ ಇಂದು ರಾಜೀನಾಮೆಗಾಗಿ ವಿದ್ಯಾರ್ಥಿಗಳು ಬೀದಿಗಿಳಿಯಬೇಕಾದ ಪರಿಸ್ಥಿತಿ ಬಂದಿದೆ. ಇದು ಬದಲಾಗಿರುವ ರಾಜಕೀಯ ಸಂಸ್ಕೃತಿಗೆ ಉದಾಹರಣೆ.**
>
> **- ಅನಿಲ್ ಲಾಲ್ ಬಹದ್ದೂರ್ ಶಾಸ್ತ್ರಿ**

> **ಅಂಗಾಂಗ ದಾನ ನೋಂದಣಿಯಲ್ಲಿ ಗದಗ ಜಿಲ್ಲೆ ಹಿಂದೆ 21ನೇ ಸ್ಥಾನದಲ್ಲಿತ್ತು. ಸೇವಾ ತಂಡದ ಸಂಘಟಿತ ಪ್ರಯತ್ನದಿಂದ ಇದೀಗ ಮೂರನೇ ಸ್ಥಾನಕ್ಕೆ ಬಂದಿದೆ. ಅಕ್ಟೋಬರ್ 2ರ ವೇಳೆಗೆ ರಾಜ್ಯದಲ್ಲೇ ಮೊದಲ ಸ್ಥಾನಕ್ಕೇರುವ ಗುರಿ ಹೊಂದಿದ್ದು, ಅದಕ್ಕಾಗಿ ನಿರಂತರ ಪ್ರಯತ್ನ ಮಾಡಲಾಗುತ್ತಿದೆ.**
>
> **- ಪ್ರಭು ಬುರಬುರೆ,** ಅಧ್ಯಕ್ಷರು, ಎಚ್.ಕೆ. ಪಾಟೀಲ ಸೇವಾ ತಂಡ

### ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಸ್ಮರಿಸಿದ ಸಚಿವ ರಾಯರಡ್ಡಿ

# ಸ್ವಾತಂತ್ರ್ಯ ಹೋರಾಟದ ಇತಿಹಾಸ ಅನನ್ಯ



> **ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನದಿಂದ ನಮಗೆ ಸ್ವಾತಂತ್ರ್ಯ ಲಭಿಸಿದೆ. ಗದಗ ಜಿಲ್ಲೆಯ ಸ್ವಾತಂತ್ರ್ಯ ಸೇನಾನಿಗಳ ಹೋರಾಟ ಮತ್ತು ತ್ಯಾಗವನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ.**
>
> **- ಬಸವರಾಜ ರಾಯರಡ್ಡಿ,** ಉನ್ನತ ಶಿಕ್ಷಣ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರು

**ವಿಜಯಸಾಕ್ಷಿ ಸುದ್ದಿ, ಗದಗ**

ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಗದಗ ಜಿಲ್ಲೆಯ ಸ್ವಾತಂತ್ರ್ಯ ಸೇನಾನಿಗಳ ಪಾತ್ರ ಅನನ್ಯವಾಗಿದ್ದು, ಅವರ ತ್ಯಾಗ ಮತ್ತು ಬಲಿದಾನದಿಂದ ದೇಶಕ್ಕೆ ಸ್ವಾತಂತ್ರ್ಯ ದೊರೆತಿದೆ ಎಂದು ಉನ್ನತ ಶಿಕ್ಷಣ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಹೇಳಿದರು. ಗದಗ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದಿಂದ ಶನಿವಾರ ಆಯೋಜಿಸಿದ್ದ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಸಾರ್ವಜನಿಕ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಗದಗ ಪರಿಸರದಲ್ಲಿ ನಡೆದ ಸ್ವಾತಂತ್ರ್ಯ ಹೋರಾಟದ ಇತಿಹಾಸ ರೋಚಕವಾಗಿದೆ. 1857ರಿಂದಲೇ ಜಿಲ್ಲೆಯಲ್ಲಿ ಸ್ವಾತಂತ್ರ್ಯ ಹೋರಾಟದ ಕಿಚ್ಚು ಹೊತ್ತಿಕೊಂಡಿತ್ತು. ನರಗುಂದದ ಬಾಬಾಸಾಹೇಬ, ಮುಂಡರಗಿಯ ಭೀಮರಾವ್, ಡಂಬಳದ ಕೆಂಚನಗೌಡ್ರ, ಅನಂತರಾವ್ ಜಾಲಿಹಾಳ, ಡಾ. ವಾಸುದೇವರಾವ್ ಉಮಚಗಿ, ಬೆಟಗೇರಿಯ ತ್ರಿಮಲ್ಲೆ, ಮಳೇಕರ, ಜಯರಾಮಾಚಾರ್ಯ ಮಳಗಿ, ಡಂಬಳದ ಶ್ರೀನಿವಾಸರಾವ್ ಕಳ್ಳಿ, ತಿಪ್ಪಣ್ಣ ಶಾಸ್ತ್ರಿ, ಅಂದಾನಪ್ಪ ದೊಡ್ಡಮೇಟಿ, ಕೌತಾಳ ವೀರಪ್ಪ, ಕೆ.ಎಚ್. ಪಾಟೀಲ ಸೇರಿದಂತೆ ಅಸಂಖ್ಯಾತ ಹೋರಾಟಗಾರರ ಕೊಡುಗೆ ಅವಿಸ್ಮರಣೀಯವಾಗಿದೆ ಎಂದರು.

ದೇಶಭಕ್ತ ಮೈಲಾರ ಮಹದೇವಪ್ಪ ಅವರ ನೇತೃತ್ವದಲ್ಲಿ ಕೋಗನೂರು, ಶಿಗ್ಲಿ, ಹೆಬ್ಬಾಳ, ನಾಗರಮಡುವು, ವರವಿ, ಹೊಸೂರು, ಅಂಕಲಿ ಸೇರಿದಂತೆ ಹಲವು ಗ್ರಾಮಗಳ ಹೋರಾಟಗಾರರು ಚಳವಳಿಯಲ್ಲಿ ಧುಮುಕಿ ಅಪಾರ ತ್ಯಾಗ ಮಾಡಿದ್ದಾರೆ. 1942ರ ಭಾರತ ಬಿಟ್ಟು ತೊಲಗಿ ಚಳವಳಿಯಲ್ಲಿಯೂ ಗದಗ ಜಿಲ್ಲೆ ಸಂಪೂರ್ಣವಾಗಿ ತೊಡಗಿಸಿಕೊಂಡಿತ್ತು. ಡಾ. ಬಿ.ಜಿ. ಹುಲಗಿ, ಶಂಕ್ರಪ್ಪ ಗುಡ್ಡದ, ಇಸ್ಮಾಯಿಲ ಸಾಹೇಬ, ಕಲ್ಲೂರ ರಾಮಾಚಾರಿ, ವೆಂಕಟೇಶ ಮಾಗಡಿ, ಕೋಗನೂರ ನಿಂಗಪ್ಪ ಸೇರಿದಂತೆ ಅನೇಕರು ಕಠಿಣ ಶಿಕ್ಷೆ ಅನುಭವಿಸಿದರು ಎಂದು ಸ್ಮರಿಸಿದರು.

**ಸಾಹಿತ್ಯ ಸಂಸ್ಕೃತಿಯ ಶ್ರೀಮಂತ ಪರಂಪರೆ**

ಗದಗ ಜಿಲ್ಲೆ ಸ್ವಾತಂತ್ರ್ಯ ಹೋರಾಟ ಮಾತ್ರವಲ್ಲದೆ ಸಾಹಿತ್ಯ, ಸಂಗೀತ, ಸಂಸ್ಕೃತಿ ಕ್ಷೇತ್ರದಲ್ಲಿಯೂ ಅಪಾರ ಕೊಡುಗೆ ನೀಡಿದೆ. ಪಂಪ, ನಾಗವರ್ಮ, ಕುಮಾರವ್ಯಾಸ, ಚಾಮರಸ, ಮುಕ್ತಾಯಕ್ಕರಿಂದ ಹಿಡಿದು ಕೀರ್ತಿನಾಥ ಕುರ್ತಕೋಟಿ, ಚನ್ನವೀರ ಕಣವಿ, ಗಿರಡ್ಡಿ ಗೋವಿಂದರಾಜ, ಎನ್.ಕೆ. ಕುಲಕರ್ಣಿ, ಮಾಧವ ಕುಲಕರ್ಣಿ, ಎಚ್.ಎನ್. ಹೂಗಾರ, ರಾಜಶೇಖರ ಭೂಸನೂರಮಠ, ಭಾರತರತ್ನ ಪಂಡಿತ ಭೀಮಸೇನ ಜೋಶಿ, ಪಂಚಾಕ್ಷರಿ ಗವಾಯಿಗಳು, ಡಾ. ಪುಟ್ಟರಾಜ ಕವಿ ಗವಾಯಿಗಳು ಹಾಗೂ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರೆಗೆ ಜಿಲ್ಲೆಯ ಸಾಧಕರ ಪರಂಪರೆ ದೊಡ್ಡದಾಗಿದೆ ಎಂದರು.

ರಾಜ್ಯ ಸರ್ಕಾರ ವಿವಿಧ ಹಂತಗಳಲ್ಲಿ ಸುಮಾರು ₹1.20 ಲಕ್ಷ ಕೋಟಿ ಮೊತ್ತದ ಸಬ್ಸಿಡಿ ನೀಡುತ್ತಿದೆ. ರಾಜ್ಯದ ಸುಮಾರು 36.10 ಲಕ್ಷ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಒದಗಿಸಲಾಗುತ್ತಿದ್ದು, ರೈತರಿಗೆ ಶೂನ್ಯ ಬಡ್ಡಿದರದಲ್ಲಿ ₹5 ಲಕ್ಷದವರೆಗೆ ಸಾಲ ವಿತರಿಸಲಾಗುತ್ತಿದೆ ಎಂದರು.

ಗದಗ ಜಿಲ್ಲೆಯ ಕಪ್ಪತ್ತಗುಡ್ಡದ ನೈಸರ್ಗಿಕ ಸಂಪತ್ತನ್ನು ಸಂರಕ್ಷಿಸುವುದರ ಜೊತೆಗೆ ಪ್ರವಾಸೋದ್ಯಮ ಅಭಿವೃದ್ಧಿಗೂ ಆದ್ಯತೆ ನೀಡಲಾಗುವುದು. ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಜಿಲ್ಲೆಯ ಹೆಮ್ಮೆಯಾಗಿದ್ದು, ಗ್ರಾಮೀಣಾಭಿವೃದ್ಧಿ ಕ್ಷೇತ್ರದಲ್ಲಿ ಶಿಕ್ಷಣ, ಸಂಶೋಧನೆ ಮತ್ತು ತರಬೇತಿಗೆ ಮಹತ್ವದ ಕೊಡುಗೆ ನೀಡುತ್ತಿದೆ ಎಂದು ಹೇಳಿದರು.

ಜಿಲ್ಲೆಯ ಐತಿಹಾಸಿಕ, ಸಾಂಸ್ಕೃತಿಕ ಹಾಗೂ ನೈಸರ್ಗಿಕ ವೈಶಿಷ್ಟ್ಯಗಳನ್ನು ಉಳಿಸಿಕೊಂಡು ಸಮಗ್ರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ. ಜಿಲ್ಲೆಯ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ಬಸವರಾಜ ರಾಯರಡ್ಡಿ ಭರವಸೆ ನೀಡಿದರು.

ಸಮಾರಂಭದ ಅಧ್ಯಕ್ಷತೆಯನ್ನು ಶಾಸಕ ಡಾ. ಎಚ್.ಕೆ. ಪಾಟೀಲ ವಹಿಸಿದ್ದರು. ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷಕುಮಾರ್ ಕೆ., ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಗಣ್ಯರು, ಸಾರ್ವಜನಿಕರು ಹಾಗೂ ಅಪಾರ ಸಂಖ್ಯೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ವರ್ಗಾವಣೆ ದಂಧೆಯಾಗಿ ಬದಲಾಗಿದೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕೆಲ ಅಧಿಕಾರಿಗಳು, ಶಾಸಕರು ಹಾಗೂ ಸಚಿವರ ಮೂಲಕ ಆಯಕಟ್ಟಿನ ಸ್ಥಳಗಳಿಗೆ ವರ್ಗಾವಣೆ ಮಾಡಿಸಿಕೊಳ್ಳುತ್ತಿರುವುದರಿಂದ ವರ್ಗಾವಣೆ ವ್ಯವಸ್ಥೆಯೇ ದಂಧೆಯಾಗಿ ಮಾರ್ಪಟ್ಟಿದೆ ಎಂದು ಉನ್ನತ ಶಿಕ್ಷಣ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರೆಡ್ಡಿ ಹೇಳಿದರು.

ಶನಿವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವರ್ಗಾವಣೆ ದಂಧೆಗೆ ಕಡಿವಾಣ ಹಾಕಲು ಕೆಲ ಇಲಾಖೆಗಳಲ್ಲಿ ಈಗಾಗಲೇ ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಮಾಡುವ ಕ್ರಮ ಕೈಗೊಳ್ಳಲಾಗಿದೆ. ಮುಂದಿನ ದಿನಗಳಲ್ಲಿ ಎಲ್ಲ ಇಲಾಖೆಗಳಲ್ಲೂ ಕೌನ್ಸೆಲಿಂಗ್ ಮೂಲಕವೇ ವರ್ಗಾವಣೆ ಜಾರಿಗೊಳಿಸುವ ಕುರಿತು ಚಿಂತನೆ ನಡೆಸಲಾಗುತ್ತಿದೆ. ಇದರಿಂದ ವರ್ಗಾವಣೆಯಲ್ಲಿನ ಭ್ರಷ್ಟಾಚಾರಕ್ಕೆ ಕಡಿವಾಣ ಬೀಳಲಿದೆ ಎಂಬ ನಿರೀಕ್ಷೆಯಿದೆ ಎಂದರು.

ರಾಜ್ಯದಲ್ಲಿ 3,000 ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಮಾಡಲು ಚಿಂತನೆ ನಡೆಸಲಾಗುತ್ತಿದೆ. ಕೃತಕ ಬುದ್ಧಿಮತ್ತೆ (ಎಐ) ವಿಶ್ವವಿದ್ಯಾಲಯ ಸ್ಥಾಪಿಸುವ ಬಗ್ಗೆಯೂ ಸರ್ಕಾರ ಚಿಂತನೆ ನಡೆಸುತ್ತಿದೆ. ರಾಜ್ಯದ ಉನ್ನತ ಶಿಕ್ಷಣ ವ್ಯವಸ್ಥೆಯಲ್ಲಿ ಸಾಕಷ್ಟು ಸುಧಾರಣೆ ಅಗತ್ಯವಿದ್ದು, ಈ ನಿಟ್ಟಿನಲ್ಲಿ ಹಲವು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು. ರಾಜ್ಯದಲ್ಲಿ 180ಕ್ಕೂ ಹೆಚ್ಚು ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸುವ ಸಾಧ್ಯತೆ ಇದೆ. ಬರ ಪರಿಹಾರ ಹಾಗೂ ಉದ್ಯೋಗ ಭರವಸೆ ಕಾರ್ಯಗಳಿಗೆ ಪ್ರತಿ ಜಿಲ್ಲೆಗೆ ಸುಮಾರು ₹500 ಕೋಟಿ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ಸಂಕಷ್ಟದ ಸಂದರ್ಭದಲ್ಲಿ ಕೇಂದ್ರ ಸರ್ಕಾರ ರಾಜ್ಯದ ನೆರವಿಗೆ ಬರಬೇಕು ಎಂದು ಆಗ್ರಹಿಸಿದರು.

ರಾಜ್ಯದಿಂದ ಕೇಂದ್ರ ಸರ್ಕಾರ ಸುಮಾರು ₹4.50 ಲಕ್ಷ ಕೋಟಿ ತೆರಿಗೆ ಪಡೆಯುತ್ತಿದ್ದು, ರಾಜ್ಯಕ್ಕೆ ಕೇವಲ ₹68 ಸಾವಿರ ಕೋಟಿಯಷ್ಟು ಮಾತ್ರ ವಾಪಸ್ ನೀಡುತ್ತಿದೆ. ಬರದಂತಹ ಸಂಕಷ್ಟದ ಸಂದರ್ಭದಲ್ಲಿ ಕೇಂದ್ರವು ರಾಜ್ಯಕ್ಕೆ ಅಗತ್ಯ ನೆರವು ನೀಡಬೇಕು ಎಂದರು. ಜಿಲ್ಲಾ ಉಸ್ತುವಾರಿ ಸಚಿವರಿಗೆ ಎಲ್ಲ ಅಧಿಕಾರವೂ ಇರುವುದಿಲ್ಲ. ಶಾಸಕ ಎಚ್.ಕೆ. ಪಾಟೀಲ, ವಿಧಾನಸಭಾಧ್ಯಕ್ಷ ಜಿ.ಎಸ್. ಪಾಟೀಲ ಸೇರಿದಂತೆ ಜಿಲ್ಲೆಯ ಜನಪ್ರತಿನಿಧಿಗಳ ಸಲಹೆ ಪಡೆದು ಗದಗ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಶ್ರಮಿಸುವುದಾಗಿ ಹೇಳಿದರು. ಜಿಲ್ಲಾ ಉಸ್ತುವಾರಿ ಸಚಿವನಾಗಿ ಕೆಲಸ ಮಾಡಲು ಈವರೆಗೆ ಕಡಿಮೆ ಸಮಯ ಸಿಕ್ಕಿದೆ. ಆಗಸ್ಟ್ 30ರ ನಂತರ ಇಡೀ ದಿನ ಇಲಾಖಾವಾರು ಅಧಿಕಾರಿಗಳ ಸಭೆ ನಡೆಸಿ, ಜಿಲ್ಲೆಯ ಅಭಿವೃದ್ಧಿಗೆ ಸಂಬಂಧಿಸಿದ ವಿಷಯಗಳ ಕುರಿತು ಸಮಗ್ರವಾಗಿ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

**ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಗದಗ**

ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ, (ಗ್ರಾ.ಕೈ.)
ಜಿಲ್ಲಾ ಪಂಚಾಯತ್, ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ

**ಕೈಗಾರಿಕಾ ವಸ್ತು ಪ್ರದರ್ಶನ ಹಾಗೂ ಮಾರಾಟ**

**ಗದಗ ಉತ್ಸವ–2026**

ದಿನಾಂಕ : 16–08–2026ರಂದು ರವಿವಾರ ಬೆಳಿಗ್ಗೆ 10 ಗಂಟೆಗೆ ರಕ್ತದಾನ ಶಿಬಿರ ಏರ್ಪಡಿಸಲಾಗಿದೆ.

**ರಕ್ತದಾನ ಮಾಡಿ ಜೀವ ಉಳಿಸಿ**

ದಿನಾಂಕ : 16–08–2026 ರಂದು ರವಿವಾರ ಸಮಯ : ಸಾಯಂಕಾಲ 4–30 ಗಂಟೆಗೆ

**ಶ್ರೇಷ್ಠ ವರ್ತಕ, ಶ್ರೇಷ್ಠ ಉದ್ಯಮಿ ಪ್ರಶಸ್ತಿ ಪ್ರದಾನ ಸಮಾರಂಭ**

ಸಾನಿಧ್ಯ : ಶ್ರೀ ಷ.ಬ್ರ. ಡಾ. ಕೊಟ್ಟೂರ ಬಸವೇಶ್ವರ ಶಿವಚಾರ್ಯರು
ಜುಕ್ತಿ ಹಿರೇಮಠ, ಸೂಡಿ, ಗದಗ

ಘನ ಉಪಸ್ಥಿತಿ : ಶ್ರೀ ಜಿ. ಎಸ್. ಪಾಟೀಲ
ಮಾನ್ಯ ಸಭಾಪತಿಗಳು, ವಿಧಾನಸಭೆ, ಕರ್ನಾಟಕ ಸರ್ಕಾರ, ಬೆಂಗಳೂರು

ಮುಖ್ಯ ಅತಿಥಿಗಳು : ಶ್ರೀ ಈಶ್ವರ ಖಂಡ್ರೆ
ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ ರಾಜ್ ಸಚಿವರು, ಕರ್ನಾಟಕ ಸರ್ಕಾರ, ಬೆಂಗಳೂರು
ಶ್ರೀ ಬಸವರಾಜ ರಾಯರೆಡ್ಡಿ ಉನ್ನತ ಶಿಕ್ಷಣ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರು
ಶ್ರೀ ಬಸವರಾಜ ಬೊಮ್ಮಾಯಿ ಮಾನ್ಯ ಸಂಸದರು, ಲೋಕಸಭೆ ಹಾವೇರಿ–ಗದಗ
ಡಾ|| ಎಚ್. ಕೆ. ಪಾಟೀಲ ಮಾನ್ಯ ಶಾಸಕರು, ಮಾಜಿ ಸಚಿವರು, ಗದಗ
ಶ್ರೀ ಸಿ. ಸಿ. ಪಾಟೀಲ ಮಾನ್ಯ ಶಾಸಕರು, ಮಾಜಿ ಸಚಿವರು, ನರಗುಂದ
ಡಾ. ಚಂದ್ರು ಲಮಾಣಿ ಮಾನ್ಯ ಶಾಸಕರು, ಶಿರಹಟ್ಟಿ.
ಶ್ರೀ ಎಸ್. ವಿ. ಸಂಕನೂರ ಮಾನ್ಯ ಶಾಸಕರು ವಿಧಾನ ಪರಿಷತ್ತು, ಗದಗ

ಗೌರವ ಅತಿಥಿಗಳು : ಶ್ರೀಮತಿ ಉಮಾ ರೆಡ್ಡಿ ಅಧ್ಯಕ್ಷರು, ಎಫ್.ಕೆ.ಸಿ.ಸಿ.ಐ., ಬೆಂಗಳೂರು

ಅಧ್ಯಕ್ಷತೆ : ಶ್ರೀ ಶರಣಬಸಪ್ಪ ಸಂಗಪ್ಪ ಗುಡಿಮನಿ ಅಧ್ಯಕ್ಷರು, ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಗದಗ

**ಜೀವಮಾನ ಸಾಧನೆ ಪ್ರಶಸ್ತಿ ಪುರಸ್ಕೃತರು**

ಶ್ರೀ ಆನಂದ ಎಲ್. ಪೋತ್ನಿಸ್ ಮಾಜಿ ಅಧ್ಯಕ್ಷರು, ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ
ಶ್ರೀ ಈಶಣ್ಣ ಸಿ. ಮುನವಳ್ಳಿ ಮಾಜಿ ಅಧ್ಯಕ್ಷರು, ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ

ಪ್ರಶಸ್ತಿ ಪುರಸ್ಕೃತರು : ಶ್ರೀ ಕುಮಾರ ವಿ. ಘಟ್ಟದ ಜಿ.ವಿ. ಘಟ್ಟದ ಅಗ್ರೋ ಇಂಡಸ್ಟ್ರೀಜ್ (ಕೆರೂರ) ಗದಗ, ಶ್ರೇಷ್ಠ ಉದ್ಯಮಿಗಳು
ಶ್ರೀ ಸುರೇಶಕುಮಾರ ರಾಜಮಲ್ ಓಸವಾಲ ಓಸವಾಲ ಕಲೆಕ್ಷನ್, ಗದಗ ಶ್ರೇಷ್ಠ ವರ್ತಕರು
ಶ್ರೀ ಬಸಪ್ಪ ಸಿ. ಶೆಟ್ಟಕೇರಿ ಮೆ|| ವಿ.ಎಸ್. ಶೆಟ್ಟಿಕೇರಿ ಆ್ಯಂಡ್ ಕಂಪನಿ, ನರಗುಂದ, ಶ್ರೇಷ್ಠ ವರ್ತಕರು
ಶ್ರೀ ಸಂಗಮೇಶ ಕೆ. ಗೌರಿಮಠ ಯಚ್ಚರೇಶ್ವರ ಕಿರಾಣಿ ಸ್ಟೋರ್ಸ್, ಹೊಳೆಆಲೂರ, ಶ್ರೇಷ್ಠ ವರ್ತಕರು
ಶ್ರೀ ವೀರಣ್ಣ ನಿಂಗಪ್ಪ ಸೊನ್ನದ ವಿಜಯಾ ಆಯಿಲ್ ಮಿಲ್, ಗಜೇಂದ್ರಗಡ, ಶ್ರೇಷ್ಠ ಉದ್ಯಮಿಗಳು
ಶ್ರೀ ವೀರಣ್ಣ ಹಾಲಪ್ಪ ಪವಾಡದ ಶ್ರೀಮದ್ ರಂಭಾಪುರಿ ಟೆಕ್ಸಟೈಲ್ಸ್, ಶಿಗ್ಲಿ, ಶ್ರೇಷ್ಠ ಉದ್ಯಮಿಗಳು
ಶ್ರೀ ಗೌತಮ್‌ಚಂದ ಎಂ. ಜೋಪ್ರಾ ರಾಮದೇವ ಟ್ರೇಡಿಂಗ್ ಕಂಪನಿ, ಮುಂಡರಗಿ, ಶ್ರೇಷ್ಠ ವರ್ತಕರು

ಮಹಿಳಾ ಪ್ರಶಸ್ತಿ ಪುರಸ್ಕೃತರು : ಶ್ರೀಮತಿ ನಿರ್ಮಲಾ ಡಿ. ಕೊಳ್ಳಿ
ಶ್ರೀ ಕೂಡಲಸಂಗಮೇಶ್ವರ ಪ್ಯಾಕೇಜಿಸ್, ಗದಗ, ಶ್ರೇಷ್ಠ ಮಹಿಳಾ ಉದ್ಯಮಿ

ವಿಶೇಷ ಸನ್ಮಾನಿತರು : ಶ್ರೀ ಸಿದ್ಧನಗೌಡ ಪಾಟೀಲ ಉದ್ದಿಮೇದಾರರು, (ಕಣಗಿನಹಾಳ), ಸಿಂಧನೂರು.
ಶ್ರೀ ಅರಷದ್ ಖಾಜಿ ನಿರ್ದೇಶಕರು, ಹುಮೈಮ್ ಪ್ರೈವೇಟ್ ಲಿಮಿಟೆಡ್, ಬೆಂಗಳೂರು
ಶ್ರೀಮತಿ ಸುವರ್ಣ ಸದಾಶಿವಯ್ಯ ಮದರಿಮಠ 'ನಾರಿಸಮ್ಮಾನ' ಪ್ರಶಸ್ತಿ ಪುರಸ್ಕೃತರು, ಗದಗ

ಪ್ರತಿದಿನ ಸಾಯಂಕಾಲ ಝೀ, ಕಲರ್ಸ್ ಕನ್ನಡ ಹಾಗೂ
ಸ್ಥಳೀಯ ಕಲಾವಿದರಿಂದ ಸಾಂಸ್ಕೃತಿಕ, ಸಂಗೀತ ಕಾರ್ಯಕ್ರಮಗಳು

### ಗದಗದಲ್ಲಿ 80ನೇ ಸ್ವಾತಂತ್ರ್ಯೋತ್ಸವ ಆಚರಣೆ | ವಿವಿಧ ಕ್ಷೇತ್ರಗಳ ಸಾಧಕರಿಗೆ ಜಿಲ್ಲಾಡಳಿತದಿಂದ ಗೌರವ

# ಸ್ವಾತಂತ್ರ್ಯೋತ್ಸವದ ಸಂಭ್ರಮ: ಆಕರ್ಷಕ ಪಥಸಂಚಲನ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ 80ನೇ ಸ್ವಾತಂತ್ರ್ಯೋತ್ಸವ ದಿನಾಚರಣೆಯನ್ನು ಶನಿವಾರ ಸಂಭ್ರಮದಿಂದ ಆಚರಿಸಲಾಯಿತು. ಉನ್ನತ ಶಿಕ್ಷಣ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಅವರು ಸಾರ್ವಜನಿಕವಾಗಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ, ವಿವಿಧ ಪಡೆಗಳ ಪಥಸಂಚಲನ ವೀಕ್ಷಿಸಿದರು. ಬಳಿಕ ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡಿದ ಗಣ್ಯರನ್ನು ಜಿಲ್ಲಾಡಳಿತದ ವತಿಯಿಂದ ಸನ್ಮಾನಿಸಲಾಯಿತು.

ಶಾಸಕ ಡಾ. ಎಚ್.ಕೆ. ಪಾಟೀಲ ಅಧ್ಯಕ್ಷತೆಯಲ್ಲಿ ನಡೆದ ಸಮಾರಂಭದಲ್ಲಿ ವಿವಿಧ ಇಲಾಖೆಗಳ ಸಿಬ್ಬಂದಿ, ಪೊಲೀಸ್ ಹಾಗೂ ಭದ್ರತಾ ಪಡೆಗಳು, ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳು ಶಿಸ್ತುಬದ್ಧ ಪಥಸಂಚಲನದಲ್ಲಿ ಪಾಲ್ಗೊಂಡರು.

**ಶಾಲಾ ವಿಭಾಗದಲ್ಲಿ ಯಾರಿಗೆ ಯಾವ ಸ್ಥಾನ?**


ಪಥಸಂಚಲನದ ಶಾಲಾ ವಿಭಾಗದಲ್ಲಿ ಸರ್ಕಾರಿ ಹೆಣ್ಣು ಮಕ್ಕಳ ಪ್ರೌಢಶಾಲೆ, ಎಸ್.ಎಂ.ಕೆ. ನಗರ, ಗದಗ ಪ್ರಥಮ ಸ್ಥಾನ ಪಡೆದರೆ, ಸಿ.ಎಸ್. ಪಾಟೀಲ ಬಾಲಕಿಯರ ಪ್ರೌಢಶಾಲೆ, ಗದಗ ದ್ವಿತೀಯ ಹಾಗೂ ಅಕ್ಷರ ಟೆಕ್ನೋ ಬಾಲಕಿಯರ ಪ್ರೌಢಶಾಲೆ, ಗದಗ ತೃತೀಯ ಸ್ಥಾನ ಪಡೆದುಕೊಂಡವು.

ವಿವಿಧ ಪಡೆಗಳ ವಿಭಾಗದಲ್ಲಿ ಅರಣ್ಯ ಘಟಕ ಪ್ರಥಮ, ಗೃಹರಕ್ಷಕ ದಳ ದ್ವಿತೀಯ ಹಾಗೂ ಎನ್‌ಸಿಸಿ ಸೀನಿಯರ್ ಬಾಯ್ಸ್ ತೃತೀಯ ಸ್ಥಾನ ಗಳಿಸಿದವು.

**ವಿವಿಧ ಕ್ಷೇತ್ರಗಳ ಸಾಧಕರಿಗೆ ಗೌರವ**

ಸ್ವಾತಂತ್ರ್ಯೋತ್ಸವದ ಅಂಗವಾಗಿ ಕಲೆ, ಸಾಹಿತ್ಯ, ಸಂಗೀತ, ಆಡಳಿತ, ಕೃಷಿ, ಸಮಾಜಸೇವೆ, ಶಿಕ್ಷಣ, ಆರೋಗ್ಯ, ಪತ್ರಿಕೋದ್ಯಮ, ಎನ್‌ಸಿಸಿ, ಶಿಕ್ಷಣ ಹಾಗೂ ಕ್ರೀಡಾ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರನ್ನು ಜಿಲ್ಲಾಡಳಿತದಿಂದ ಸನ್ಮಾನಿಸಲಾಯಿತು.

ಕಲೆ, ಸಾಹಿತ್ಯ, ಸಂಗೀತ, ಆಡಳಿತ, ಕೃಷಿ ಹಾಗೂ ಸಮಾಜಸೇವೆ ವಿಭಾಗದಲ್ಲಿ ಮಾರುತಿ ಜೋಗದಂಡಕರ, ವಿಶ್ವನಾಥ ಬಡಿಗೇರ, ಮಂಜುನಾಥ ಬಂಡಿಹಾಳ, ಜಾಫರ್ ಬಚೇರಿ, ಕಾಶಿಮಸಾಬ ಮುಜಾವರ, ಭಾಗ್ಯಶ್ರೀ ಹಳ್ಳಿಕೇರಿಮಠ, ಬ್ರಹ್ಮಕುಮಾರಿ ಡಾ. ಪ್ರಭಾವತಿ ಅಕ್ಕನವರು, ವೇ. ಚನ್ನವೀರಯ್ಯ ಹಿರೇಮಠ, ಶಿವಾಜಿ ಚವ್ಹಾಣ, ಬಸಪ್ಪ ಮುಸಕಿನ ಬಾವಿ ಹಾಗೂ ವಿರುಪಾಕ್ಷಪ್ಪ ಅಕ್ಕಿ ಅವರನ್ನು ಗೌರವಿಸಲಾಯಿತು.







ಶಿಕ್ಷಣ ಮತ್ತು ಆರೋಗ್ಯ ವಿಭಾಗದಲ್ಲಿ ಕಾಶಿನಾಥ ಶಿರಬಡಗಿ, ಕಳಕಪ್ಪ ಮುದ್ಲಾಪುರ, ಅಂದಾನಪ್ಪ ಬರಡಿ, ಡಾ. ವೆಂಕಟೇಶ ರಾಠೋಡ, ದೇವೇಂದ್ರ ಕಳಸಾಪುರ ಹಾಗೂ ಡಾ. ಪ್ಯಾರ್ ಅಲಿ ನೂರಾನಿ ಅವರನ್ನು ಸನ್ಮಾನಿಸಲಾಯಿತು.

ಪತ್ರಿಕೋದ್ಯಮ ಕ್ಷೇತ್ರದಲ್ಲಿ ಆನಂದ ಸಾಲಿಗ್ರಾಮ, ಲಿಂಗನಗೌಡ ಹನುಮನಗೌಡರ, ಫಾರೂಕ್ ಮಕಾನದಾರ, ನಾಗರಾಜ ಕಟ್ಟಿಮನಿ ಹಾಗೂ ಎಚ್.ಎಂ. ಶರೀಫನವರ ಅವರಿಗೆ ಸನ್ಮಾನ ದೊರೆಯಿತು.

ಎನ್‌ಸಿಸಿ, ಶಿಕ್ಷಣ ಹಾಗೂ ಕ್ರೀಡಾ ಕ್ಷೇತ್ರದಲ್ಲಿಯೂ ಹಲವು ಸಾಧಕರನ್ನು ಗುರುತಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಯಲ್ಲಮ್ಮ ಜಾಧವ, ಆಕಾಶಗೌಡ ಮರಿಗೌಡರ, ಅಕ್ಷತಾ ಹುಚ್ಚನಗೌಡ್ರ, ಸಮೃದ್ಧಿ ಸಿದ್ಧಲಿಂಗ, ಪ್ರಜ್ವಲಕುಮಾರ್ ಪೂಜಾರ, ಸಂಧ್ಯಾ ಲಮಾಣಿ, ಸಾರಂಗಮಠ, ಪ್ರವೀಣಕುಮಾರ್ ಸೊಬಗಿನ, ಸುಷ್ಮಾ ನಾಯಕ, ಪದ್ಮಾವತಿ ಶಾಬಾದಿ, ಸ್ನೇಹಾ ಕರ್ಜಗಿ, ಕಾರ್ತಿಕ ರೆಡ್ಡಿ ಕಾಮರೆಡ್ಡಿ, ಹರ್ಷಿಯಾ ಷಹಾಮುಲ್ಲಾ, ಅಲಿಯಾ ಮುಕ್ತುಂಸಾಬ, ಅರ್ಪಿನಬಾನು ಗುಡಿಸಲಮನಿ, ತನುಜಾ ಗೋಪೆಣ್ಣವರ, ಕೀರ್ತನಾ ಅವರೆಡ್ಡಿ, ಪವಿತ್ರಾ ದಪ್ಪರದಾರ, ಗೀತಾ ಉಪ್ಪಾರ, ಶೈಲಾಪವಾಡಿ, ಅಕ್ಷತಾ ಮಂಡಲಗೇರಿ, ರಾಹುಲ ಕಾರಭಾರಿ, ಮಾಲತಿ ಇನಾಮತಿ, ರಿಯಾಜ ಬನಿ, ದೇವಮ್ಮ, ಆನಂದ ಬೇಂದ್ರೆ, ಸೋಮಶೇಖರ ಬಿಚಗಲ್, ಚೇತನಕುಮಾರ್ ಅಮ್ರದ, ಮಹಾಂತೇಶ ಬೇವೂರ, ಚಂದ್ರಪ್ಪ ಬರಮಣ್ಣವರ, ನಾಶಿರುದ್ದೀನ ಮಕಾನದಾರ, ಮನೀಶಾ ಕಬ್ಬೂರ, ಪ್ರಿಯಾಂಕಾ ಲಮಾಣಿ, ಭಾಗ್ಯಾ ಮೇಲ್ಮನಿ ಹಾಗೂ ರಿಯಾನ ಅಹ್ಮದ ಸೇರಿದಂತೆ ಸಾಧಕರನ್ನು ಸನ್ಮಾನಿಸಲಾಯಿತು.

ಸಮಾರಂಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷಕುಮಾರ್ ಕೆ., ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಗಣ್ಯರು, ಸಾರ್ವಜನಿಕರು ಹಾಗೂ ಅಪಾರ ಸಂಖ್ಯೆಯ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



### ಆಕರ್ಷಿಸಿದ ಪಥಸಂಚಲನ

ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಶಂಕರಗೌಡ ಚೌಧ್ರಿ ಅವರ ನೇತೃತ್ವದಲ್ಲಿ ಪಥಸಂಚಲನ ನಡೆಯಿತು. ಜಿಲ್ಲಾ ಸಶಸ್ತ್ರ ಮೀಸಲು ಪೊಲೀಸ್ ಪಡೆಯ ನೇತೃತ್ವವನ್ನು ಆರ್‌ಎಸ್‌ಐ ಬಿಷ್ಮಪ್ಪ ತಳವಾರ, ನಾಗರಿಕ ಪೊಲೀಸ್ ಪಡೆಯ ನೇತೃತ್ವವನ್ನು ಸುಭಾಷ ಪಾಟೀಲ, ಗೃಹರಕ್ಷಕ ದಳದ ನೇತೃತ್ವವನ್ನು ಎಂ.ಎನ್. ವಸ್ತ್ರದ ಹಾಗೂ ಅಗ್ನಿಶಾಮಕ ಪಡೆಯ ನೇತೃತ್ವವನ್ನು ಲೋಕೇಶ ಜಿ.ಕೆ. ವಹಿಸಿದ್ದರು. ಅರಣ್ಯ ರಕ್ಷಕ ಪಡೆಯನ್ನು ಆರ್‌ಎಫ್‌ಒ ಸಚಿನ ಬಿಸನಳ್ಳಿ, ಎನ್‌ಸಿಸಿ ಸೀನಿಯರ್ ಬಾಯ್ಸ್ ವಿಭಾಗದಲ್ಲಿ 38 ಕೆಎಆರ್ ಬಟಾಲಿಯನ್‌ನ ಕುಮಾರ ವೆಂಕಟೇಶ ಹೊಸಮನಿ ಹಾಗೂ ಎನ್‌ಸಿಸಿ ಸೀನಿಯರ್ ಗರ್ಲ್ಸ್ ವಿಭಾಗದಲ್ಲಿ ಕುಮಾರಿ ರೇಷ್ಮಾ ಕಾರಭಾರಿ ಮುನ್ನಡೆಸಿದರು. ಗೈಡ್ಸ್, ಸ್ಕೌಟ್ಸ್, ಸೇವಾದಳ ಹಾಗೂ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಪಥಸಂಚಲನದಲ್ಲಿ ಭಾಗವಹಿಸಿ ಗಮನ ಸೆಳೆದರು.

---

## ಸಂಕ್ಷಿಪ್ತ ಸುದ್ದಿಗಳು

### ಪಿಎಂ ಕಿಸಾನ್ ಯೋಜನೆಗೆ ರೈತರ ಇ-ಕೆವೈಸಿ ಕಡ್ಡಾಯ

**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ರೈತರಿಗೆ ಕೇಂದ್ರ ಸರ್ಕಾರದಿಂದ ಪ್ರತಿ ನಾಲ್ಕು ತಿಂಗಳಿಗೊಮ್ಮೆ ₹2,000ರಂತೆ ವರ್ಷಕ್ಕೆ ಮೂರು ಕಂತುಗಳಲ್ಲಿ ಒಟ್ಟು ₹6,000 ಸಹಾಯಧನವನ್ನು ನೇರವಾಗಿ ರೈತರ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುತ್ತದೆ. ಯೋಜನೆಯಡಿ ಸಹಾಯಧನ ಪಡೆಯಲು ರೈತರು ಪ್ರತಿ ವರ್ಷವೂ ಬಯೋಮೆಟ್ರಿಕ್ ಇ-ಕೆವೈಸಿ ಮಾಡಿಸಿಕೊಳ್ಳುವುದು ಕಡ್ಡಾಯವಾಗಿದೆ. ಇ-ಕೆವೈಸಿ ಪೂರ್ಣಗೊಳಿಸಲು ಬಯೋಮೆಟ್ರಿಕ್ ಆಧಾರಿತ ಇ-ಕೆವೈಸಿ ಹಾಗೂ ಮುಖ ಗುರುತಿಸುವಿಕೆ ಆಧಾರಿತ ಇ-ಕೆವೈಸಿ ಎಂಬ ಎರಡು ವಿಧಾನಗಳಿವೆ. ಬಯೋಮೆಟ್ರಿಕ್ ಆಧಾರಿತ ಇ-ಕೆವೈಸಿ ಮಾಡಿಸಿಕೊಳ್ಳಲು ರೈತರು ಹತ್ತಿರದ ಗ್ರಾಹಕ ಸೇವಾ ಕೇಂದ್ರ, ಕರ್ನಾಟಕ ಒನ್ ಅಥವಾ ಗ್ರಾಮ ಒನ್ ಕೇಂದ್ರಕ್ಕೆ ತೆರಳಿ ಆಧಾರ್ ಕಾರ್ಡ್ ಅಥವಾ ಆಧಾರ್ ಸಂಖ್ಯೆ ನೀಡಬೇಕು. ಮುಖ ಗುರುತಿಸುವಿಕೆ ಆಧಾರಿತ ಇ-ಕೆವೈಸಿಯನ್ನು ಕೃಷಿ ಇಲಾಖೆಗೆ ಸಂಬಂಧಿಸಿದ ಮೊಬೈಲ್ ಆ್ಯಪ್ ಮೂಲಕ ಮಾಡಿಕೊಳ್ಳಬಹುದಾಗಿದೆ. ಗದಗ ಜಿಲ್ಲೆಯಲ್ಲಿ 1,18,712 ಪ್ರಧಾನಮಂತ್ರಿ ಕಿಸಾನ್ ಫಲಾನುಭವಿಗಳಿದ್ದು, ಗದಗದಲ್ಲಿ 26,866, ನರಗುಂದದಲ್ಲಿ 13,201, ಗಜೇಂದ್ರಗಡದಲ್ಲಿ 319, ರೋಣದಲ್ಲಿ 34,800, ಶಿರಹಟ್ಟಿಯಲ್ಲಿ 25,007, ಮುಂಡರಗಿಯಲ್ಲಿ 18,073 ಹಾಗೂ ಲಕ್ಷ್ಮೇಶ್ವರದಲ್ಲಿ 446 ಫಲಾನುಭವಿಗಳಿದ್ದಾರೆ. ಜಿಲ್ಲೆಯಲ್ಲಿ ಒಟ್ಟು 1,18,614 ರೈತರು ಇ-ಕೆವೈಸಿ ಮಾಡಿಸಲು ಬಾಕಿ ಇದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ರೈತರು ಬಯೋಮೆಟ್ರಿಕ್ ಆಧಾರಿತ ಅಥವಾ ಮೊಬೈಲ್ ಆ್ಯಪ್ ಮೂಲಕ ಇ-ಕೆವೈಸಿ ಪ್ರಕ್ರಿಯೆಯನ್ನು ಪೂರ್ಣಗೊಳಿಸುವಂತೆ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಭಾರತ ಜೋಡೋ ಯುವ ಸಂಘಗಳ ನೋಂದಣಿಗೆ ಅರ್ಜಿ ಆಹ್ವಾನ


**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಗ್ರಾಮ ಪಂಚಾಯಿತಿ ಹಾಗೂ ನಗರ ಪ್ರದೇಶಗಳ ವಾರ್ಡ್‌ಗಳ ವ್ಯಾಪ್ತಿಯಲ್ಲಿ ಭಾರತ ಜೋಡೋ ಯುವ ಸಂಘಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದ್ದು, ಅರ್ಹ ಯುವಕರು ಸಂಘಗಳ ನೋಂದಣಿ ಮಾಡಿಕೊಳ್ಳುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ತಿಳಿಸಿದೆ. ಪ್ರತಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ 4,000 ಜನಸಂಖ್ಯೆಗೆ ಒಂದು ಸಂಘ, ಪುರಸಭೆ ವ್ಯಾಪ್ತಿಯಲ್ಲಿ 6,000 ಜನಸಂಖ್ಯೆಗೆ ಒಂದು ಸಂಘ, ನಗರಸಭೆ ವ್ಯಾಪ್ತಿಯಲ್ಲಿ ಸರಾಸರಿ 8,000 ಜನಸಂಖ್ಯೆಗೆ ಒಂದು ಸಂಘ ಹಾಗೂ ಮಹಾನಗರ ಪಾಲಿಕೆ ಮತ್ತು ಜಿ.ಬಿ.ಎ. ವ್ಯಾಪ್ತಿಯಲ್ಲಿ ಸರಾಸರಿ 10,000 ಜನಸಂಖ್ಯೆಗೆ ಒಂದು ಭಾರತ ಜೋಡೋ ಯುವ ಸಂಘ ಸ್ಥಾಪಿಸಬಹುದಾಗಿದೆ. ಅರ್ಹ ಯುವಕರು ಭಾರತ ಜೋಡೋ ಯುವ ಸಂಘಗಳ ನೋಂದಣಿಗಾಗಿ ಮೂಲಕ ಅರ್ಜಿ ಸಲ್ಲಿಸುವಂತೆ ಗದಗ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ವಿಶೇಷ ಕ್ರೀಡಾಕೂಟ | ಅಂಗಾಂಗ ದಾನದ ಕುರಿತು ಭಯ, ತಪ್ಪು ಕಲ್ಪನೆ ನಿವಾರಣೆಗೆ ಜಾಗೃತಿ

### ರಾಜ್ಯದಲ್ಲೇ ಮೊದಲ ಟ್ರಾನ್ಸ್‌ಪ್ಲಾಂಟ್ ಗೇಮ್ಸ್‌ಗೆ ಗದಗ ಸಜ್ಜು




**ವಿಜಯಸಾಕ್ಷಿ ಸುದ್ದಿ, ಗದಗ**

ಅಂಗಾಂಗ ಕಸಿ ಮಾಡಿಸಿಕೊಂಡವರು ಹಾಗೂ ಅಂಗಾಂಗ ದಾನಿಗಳಲ್ಲಿ ಆತ್ಮವಿಶ್ವಾಸ ಮೂಡಿಸುವುದು ಮತ್ತು ಅಂಗಾಂಗ ದಾನದ ಕುರಿತು ಸಮಾಜದಲ್ಲಿರುವ ಭಯ, ತಪ್ಪು ಕಲ್ಪನೆಗಳನ್ನು ನಿವಾರಿಸಿ ಜಾಗೃತಿ ಮೂಡಿಸುವ ಉದ್ದೇಶದಿಂದ ಆ.16ರಂದು ಗದಗದ ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ರಾಜ್ಯದಲ್ಲೇ ಮೊದಲ ಬಾರಿಗೆ ಗದಗ್ ಟ್ರಾನ್ಸ್‌ಪ್ಲಾಂಟ್ ಗೇಮ್ಸ್-2026 ಆಯೋಜಿಸಲಾಗಿದೆ ಎಂದು ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ ತಿಳಿಸಿದರು.

ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಕಲ್ಪ ಕಿಡ್ನಿ ಕೇರ್ ಫೌಂಡೇಶನ್, ಕೆ.ಎಚ್. ಪಾಟೀಲ ಆಸ್ಪತ್ರೆ ಹಾಗೂ ಎಚ್.ಕೆ. ಪಾಟೀಲ ಪ್ರತಿಷ್ಠಾನದ ಸಂಯುಕ್ತ ಆಶ್ರಯದಲ್ಲಿ ಕಾರ್ಯಕ್ರಮ ನಡೆಯಲಿದೆ. ಅಂಗಾಂಗ ಕಸಿ ಬಳಿಕವೂ ವ್ಯಕ್ತಿ ಸಾಮಾನ್ಯ ಜೀವನ ನಡೆಸಬಹುದು ಎಂಬ ಸಂದೇಶವನ್ನು ಸಮಾಜಕ್ಕೆ ಸಾರುವುದು ಕ್ರೀಡಾಕೂಟದ ಪ್ರಮುಖ ಉದ್ದೇಶವಾಗಿದೆ ಎಂದರು.

ಕಿಡ್ನಿ ಸೇರಿದಂತೆ ವಿವಿಧ ಅಂಗಾಂಗ ಕಸಿ ಮಾಡಿಸಿಕೊಂಡವರು, ಅಂಗಾಂಗ ದಾನಿಗಳು ಹಾಗೂ ಡಯಾಲಿಸಿಸ್‌ನಲ್ಲಿರುವವರನ್ನು ಒಂದೇ ವೇದಿಕೆಗೆ ಕರೆತಂದು ಕ್ರೀಡಾಕೂಟ ಆಯೋಜಿಸಲಾಗಿದೆ. ವೈದ್ಯರ ಸಲಹೆಯಂತೆ ಕಸಿ ಮಾಡಿಸಿಕೊಂಡವರು ದೈಹಿಕವಾಗಿ ಹೆಚ್ಚು ಒತ್ತಡಕ್ಕೆ ಒಳಗಾಗದ ರೀತಿಯಲ್ಲಿ ಕ್ರೀಡೆಗಳನ್ನು ಆಯ್ಕೆ ಮಾಡಲಾಗಿದೆ ಎಂದು ಹೇಳಿದರು.

ಸಂಕಲ್ಪ ಕಿಡ್ನಿ ಕೇರ್ ಫೌಂಡೇಶನ್‌ನ ಡಾ. ಅವಿನಾಶ ಓದುಗೌಡ್ರ, ಮಾತನಾಡಿ, ರಾಜ್ಯದ ವಿವಿಧ ಜಿಲ್ಲೆಗಳಿಂದ ಅಂಗಾಂಗ ಕಸಿ ಮಾಡಿಸಿಕೊಂಡವರು ಹಾಗೂ ದಾನಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಬೆಂಗಳೂರಿನಿಂದ ಹೃದಯ ಕಸಿ ಮಾಡಿಸಿಕೊಂಡ ವ್ಯಕ್ತಿಯೊಬ್ಬರೂ ಪಾಲ್ಗೊಳ್ಳಲಿದ್ದಾರೆ. ಈಗಾಗಲೇ ಸುಮಾರು 75 ಮಂದಿ ನೋಂದಣಿ ಮಾಡಿಕೊಂಡಿದ್ದು, ಆನ್‌ಸ್ಪಾಟ್ ನೋಂದಣಿಯೊಂದಿಗೆ 75ರಿಂದ 100 ಮಂದಿ ಭಾಗವಹಿಸುವ ನಿರೀಕ್ಷೆಯಿದೆ ಎಂದರು.

> ಅಂಗಾಂಗ ಕಸಿ ಮಾಡಿಸಿಕೊಂಡವರು ಸಹ ಸಾಮಾನ್ಯ ಜೀವನ ನಡೆಸಬಹುದು ಎಂಬ ಆತ್ಮವಿಶ್ವಾಸ ಮೂಡಿಸುವುದು ಹಾಗೂ ಅಂಗಾಂಗ ದಾನದ ಕುರಿತು ಜನರಲ್ಲಿರುವ ಭಯ ಮತ್ತು ತಪ್ಪು ಕಲ್ಪನೆಗಳನ್ನು ದೂರ ಮಾಡುವುದು ಟ್ರಾನ್ಸ್‌ಪ್ಲಾಂಟ್ ಗೇಮ್ಸ್‌ನ ಉದ್ದೇಶ.
>
> **- ಕೃಷ್ಣಗೌಡ ಪಾಟೀಲ,**
> ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ

ಟ್ರಾನ್ಸ್‌ಪ್ಲಾಂಟ್ ಗೇಮ್ಸ್‌ನಲ್ಲಿ 100 ಮೀ., 200 ಮೀ. ವಾಕಿಂಗ್, ರನ್ನಿಂಗ್, 400 ಮೀ. ವಾಕ್, ಶಾಟ್‌ಪುಟ್, ಡಿಸ್ಕಸ್ ಥ್ರೋ ಸೇರಿದಂತೆ ವಿವಿಧ ಕ್ರೀಡಾ ಸ್ಪರ್ಧೆಗಳು ನಡೆಯಲಿವೆ. ಬ್ಯಾಡ್ಮಿಂಟನ್, ಟೇಬಲ್ ಟೆನ್ನಿಸ್, ಕ್ಯಾರಂ, ಟಗ್ ಆಫ್ ವಾರ್ ಹಾಗೂ ಮ್ಯೂಸಿಕಲ್ ಚೇರ್‌ನಂತಹ ಮನರಂಜನಾ ಸ್ಪರ್ಧೆಗಳನ್ನೂ ಆಯೋಜಿಸಲಾಗಿದೆ.

ಡಯಾಲಿಸಿಸ್‌ನಲ್ಲಿರುವವರ ಆರೋಗ್ಯದ ದೃಷ್ಟಿಯಿಂದ ಅವರಿಗೆ ಸೂಕ್ತವಾಗುವ ಲಘು ಕ್ರೀಡೆಗಳನ್ನು ಆಯ್ಕೆ ಮಾಡಲಾಗಿದೆ. ಸ್ಪರ್ಧೆಗಳಲ್ಲಿ ಡೋನರ್, ರಿಸಿಪಿಯೆಂಟ್ ಹಾಗೂ ಡಯಾಲಿಸಿಸ್ ರೋಗಿಗಳೆಂದು ಮೂರು ಪ್ರಮುಖ ವಿಭಾಗಗಳನ್ನು ಮಾಡಲಾಗಿದ್ದು, ವಯಸ್ಸಿನ ಆಧಾರದಲ್ಲಿಯೂ ವರ್ಗೀಕರಣ ಮಾಡಲಾಗಿದೆ ಎಂದು ಡಾ. ಅವಿನಾಶ ಓದುಗೌಡ್ರ ತಿಳಿಸಿದರು.

ಅಂಗಾಂಗ ದಾನದ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಜಿಲ್ಲೆಯ ಸುಮಾರು 150 ಶಾಲೆಗಳಲ್ಲಿ 7ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಪ್ರಬಂಧ ಹಾಗೂ ಭಾಷಣ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ಪ್ರತಿ ಶಾಲೆಯಿಂದ ಇಬ್ಬರು ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ ತಾಲೂಕು ಹಾಗೂ ಜಿಲ್ಲಾ ಮಟ್ಟದ ಸ್ಪರ್ಧೆ ನಡೆಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಸುಮಾರು 120 ವಿದ್ಯಾರ್ಥಿಗಳು ಭಾಗವಹಿಸಿದ್ದು, ಅಂತಿಮವಾಗಿ ಭಾಷಣ ಸ್ಪರ್ಧೆಯಲ್ಲಿ 10 ಹಾಗೂ ಪ್ರಬಂಧ ಸ್ಪರ್ಧೆಯಲ್ಲಿ ಆರು ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದೆ.

ಆ.16ರಂದು ನಡೆಯುವ ಟ್ರಾನ್ಸ್‌ಪ್ಲಾಂಟ್ ಗೇಮ್ಸ್ ಕಾರ್ಯಕ್ರಮದಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಗುವುದು ಎಂದು ಆನಂದ ಪೋತ್ನೀಸ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಅಶೋಕ ಮಂದಾಲಿ, ಡಾ. ಪವನ್ ಕುರಹಟ್ಟಿ, ಸಂಕಲ್ಪ ಕಿಡ್ನಿ ಕೇರ್ ಫೌಂಡೇಶನ್ ಹಾಗೂ ಕೆ.ಎಚ್. ಪಾಟೀಲ ಆಸ್ಪತ್ರೆಯ ವೈದ್ಯರು ಮತ್ತು ಪದಾಧಿಕಾರಿಗಳು ಉಪಸ್ಥಿತರಿದ್ದರು.

---

ನೂರಾರು ದೇಶಪ್ರೇಮಿಗಳಿಂದ ರಾಷ್ಟ್ರಾಭಿಮಾನದ ಸಂದೇಶ

### 100 ಮೀಟರ್ ತ್ರಿವರ್ಣ ಯಾತ್ರೆ ಯಶಸ್ವಿ

**ವಿಜಯಸಾಕ್ಷಿ ಸುದ್ದಿ, ಗದಗ**

ಸ್ವಾತಂತ್ರ್ಯ ದಿನಾಚರಣೆಯ ಪೂರ್ವಭಾವಿಯಾಗಿ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ವತಿಯಿಂದ ಆಯೋಜಿಸಿದ್ದ ಬೃಹತ್ 100 ಮೀಟರ್ ತ್ರಿವರ್ಣ ಯಾತ್ರೆ ಶುಕ್ರವಾರ ನಗರದಲ್ಲಿ ಅದ್ದೂರಿಯಾಗಿ ಜರುಗಿತು. ನೂರಾರು ದೇಶಪ್ರೇಮಿಗಳು ಬೃಹತ್ ತ್ರಿವರ್ಣ ಧ್ವಜವನ್ನು ಹೆಮ್ಮೆಯಿಂದ ಹೊತ್ತು ಸಾಗುವ ಮೂಲಕ ದೇಶಭಕ್ತಿ, ಏಕತೆ ಹಾಗೂ ರಾಷ್ಟ್ರಾಭಿಮಾನದ ಸಂದೇಶ ಸಾರಿದರು.

ಲಯನ್ಸ್ ಕ್ಲಬ್ ಆಫ್ ಗದಗ-ಬೆಟಗೇರಿ ಹಾಗೂ ಗದಗ ಜಿಲ್ಲಾ ಬಟ್ಟೆ ವ್ಯಾಪಾರಸ್ಥರ ಸಂಘದ ಸಹಯೋಗದಲ್ಲಿ ನಡೆದ ಯಾತ್ರೆಗೆ ಲಯನ್ಸ್ ಜಿಲ್ಲೆಯ 317ಬಿ ನಿಕಟಪೂರ್ವ ಜಿಲ್ಲಾ ಗವರ್ನರ್ ಆನಂದ ಪೋತ್ನೀಸ್ ಚಾಲನೆ ನೀಡಿದರು. ನಗರದ ಬಸವೇಶ್ವರ ಸರ್ಕಲ್ (ಹತ್ತಿಕಾಳ ಕೂಟ)ದಿಂದ ಆರಂಭಗೊಂಡ ಯಾತ್ರೆ, ನಾಮಜೋಶಿ ರಸ್ತೆ, ಹುಯಿಲಗೋಳ ನಾರಾಯಣರಾವ್ ವೃತ್ತ, ಮಹೇಂದ್ರಕರ ವೃತ್ತ ಹಾಗೂ ಮಹಾತ್ಮ ಗಾಂಧಿ ವೃತ್ತ ಮಾರ್ಗವಾಗಿ ಸಾಗಿ ಲಯನ್ಸ್ ಭವನದಲ್ಲಿ ಮುಕ್ತಾಯಗೊಂಡಿತು.

ಬೃಹತ್ ತ್ರಿವರ್ಣ ಧ್ವಜದೊಂದಿಗೆ ಸಾಗಿದ ಯಾತ್ರೆ, ನಗರದ ಪ್ರಮುಖ ಬೀದಿಗಳಲ್ಲಿ ದೇಶಭಕ್ತಿಯ ವಾತಾವರಣ ನಿರ್ಮಿಸಿತು. ಯಾತ್ರೆಯಲ್ಲಿ ಪಾಲ್ಗೊಂಡವರು ಭಾರತ ಮಾತೆಯ ಘೋಷಣೆಗಳನ್ನು ಮೊಳಗಿಸುತ್ತಾ, ಪುಷ್ಪವೃಷ್ಟಿಗೈದು ರಾಷ್ಟ್ರಧ್ವಜಕ್ಕೆ ಗೌರವ ಸಲ್ಲಿಸಿದರು.

ಗದಗ ಜಿಲ್ಲಾ ಮಾಜಿ ಸೈನಿಕರ ಸಂಘದ ಮಾಜಿ ಸೈನಿಕರಾದ ಎಸ್.ಆರ್. ಪಾಟೀಲ, ವ್ಹಿ.ಬಿ. ಬಿಂಗಿ, ಎಸ್.ಬಿ. ಸರ್ವಿ, ಶಂಕರಗೌಡ ಪಾಟೀಲ, ಅರವಟಗಿಮಠ, ವಿಜಯ ಬಡಿಗೇರ, ಚವ್ಹಾಣ ಸೇರಿದಂತೆ ಹಲವರು ಭಾಗವಹಿಸಿ ಕಾರ್ಯಕ್ರಮಕ್ಕೆ ಮೆರುಗು ತಂದರು.

ಜೈನ್ ಸಮಾಜದ ಮಹಿಳಾ ಸಂಘಟನೆಯಾದ ವೀರ ಬಾಲಿಕಾ ಮಂಡಲದ ಪದಾಧಿಕಾರಿಗಳು ಹಾಗೂ ಸದಸ್ಯರು ಉತ್ಸಾಹದಿಂದ ಪಾಲ್ಗೊಂಡು ತ್ರಿವರ್ಣ ಯಾತ್ರೆಯ ಯಶಸ್ಸಿಗೆ ಕೈಜೋಡಿಸಿದರು.

ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ಪ್ರವೀಣ ವಾರಕರ, ಕಾರ್ಯದರ್ಶಿ ಲಿಂಗರಾಜ ತೋಟದ, ಖಜಾಂಚಿ ರೇಣುಕಪ್ರಸಾದ ಶಿಗ್ಲಿಮಠ, ರಾಜಣ್ಣ ಮಲ್ಲಾಡದ, ರಮೇಶ ಶಿಗ್ಲಿ, ರೇಣುಕಪ್ರಸಾದ ಹಿರೇಮಠ, ರಾಜಣ್ಣ ವೇರ್ಣೆಕರ, ವೀರೇಶ ಪಟ್ಟಣಶೆಟ್ಟಿ, ಡಾ. ಸಿ.ಬಿ. ಹಿರೇಗೌಡ್ರ, ಡಾ. ಜೆ.ಸಿ. ಶಿರೋಳ, ಸಂಜಯ ರುದ್ದಂ, ದತ್ತು ಬೇವಿನಕಟ್ಟಿ, ಅಶ್ವಥ್ ಸುಲಾಖೆ, ಜೆ.ಡಿ. ಉತ್ತರಕರ, ಸಂತೋಷ ಕಬಾಡರ, ಅಂಕಿತ ಸಾವಕರ, ಶಿವಕುಮಾರ ಶೆಟ್ಟರ, ವೀರಣ್ಣ ಬಾಳಿಕಾಯಿ, ರಾಹುಲ್ ಅರಳಿ ಸೇರಿದಂತೆ ಲಯನ್ಸ್ ಕ್ಲಬ್‌ನ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.


ಲಯನ್ ಲೇಡೀಸ್ ಕ್ಲಬ್ ಅಧ್ಯಕ್ಷೆ ಅಮೃತಾ ವಾರಕರ, ಕಾರ್ಯದರ್ಶಿ ಅಪರ್ಣಾ ತೋಟದ, ಖಜಾಂಚಿ ಪ್ರಿಯಾ ಶಿಗ್ಲಿಮಠ, ವೀಣಾ ಸುಲಾಖೆ ಸೇರಿದಂತೆ ಪದಾಧಿಕಾರಿಗಳು ಹಾಗೂ ಸದಸ್ಯರು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದರು.



---

ಕಲಾ ಸಂಭ್ರಮ, ಕಲಾ ಪ್ರದರ್ಶನದ ಮೂಲಕ ಕಲಾ ಪರಂಪರೆಗೆ ಹೊಸ ಚೈತನ್ಯ

# ಕಲಾ ಮಹರ್ಷಿ ಟಿ.ಪಿ. ಅಕ್ಕಿಯವರ ಬೆವರಿನ ಕುರುಹು ವಿಜಯ ಕಲಾ ಮಂದಿರ





ಕಲೆ ಎಂದರೆ ಕೇವಲ ಭಾವನೆಗಳ ಅಭಿವ್ಯಕ್ತಿಯಲ್ಲ; ಅದು ಸೃಜನಶೀಲ ತಪಸ್ಸು. ಮಾನವನಲ್ಲಿ ಮಾನವೀಯ ಮೌಲ್ಯ, ಆತ್ಮಸ್ಥೈರ್ಯ ಹಾಗೂ ಸಾಮಾಜಿಕ ಬಾಂಧವ್ಯವನ್ನು ಬೆಳೆಸುವ ಶಕ್ತಿ ಕಲೆಗೆ ಇದೆ. ಇಂತಹ ಕಲೆಯನ್ನೇ ಬದುಕಿನ ಉಸಿರಾಗಿಸಿಕೊಂಡು, ಹಲವು ಕಷ್ಟ-ಸವಾಲುಗಳನ್ನು ಎದುರಿಸಿ ಕಲಾ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದವರು ಕಲಾ ಮಹರ್ಷಿ ಟಿ.ಪಿ. ಅಕ್ಕಿಯವರು.

ಸ್ವಾತಂತ್ರ್ಯೋತ್ತರ ಅವಧಿಯಲ್ಲಿ ವಿಜಯ ಕಲಾ ಮಂದಿರ ಸಂಸ್ಥೆಯನ್ನು ಸ್ಥಾಪಿಸಿ, ನೂರಾರು ಕಲಾ ವಿದ್ಯಾರ್ಥಿಗಳಿಗೆ ದಾರಿದೀಪವಾದ ಟಿ.ಪಿ. ಅಕ್ಕಿಯವರ ಕಲಾ ಸೇವೆಯ ಕುರುಹುಗಳು ಇಂದಿಗೂ ವಿಜಯ ಕಲಾ ಮಂದಿರದಲ್ಲಿ ಜೀವಂತವಾಗಿವೆ. ಕಲೆಯನ್ನು ಉಳಿಸಿ ಬೆಳೆಸುವುದರ ಜತೆಗೆ ಕಲಾವಿದರನ್ನು ರೂಪಿಸುವ ಮಹತ್ವದ ಕಾರ್ಯವನ್ನು ಅವರು



ಕೈಗೊಂಡಿದ್ದರು. ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಕಲಾವಿದರೊಂದಿಗೆ ಸಂಪರ್ಕ ಬೆಳೆಸಿ, ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಅವರಿಗೆ ಕಲಾ ಶಿಕ್ಷಣ ನೀಡಿದ ಕೀರ್ತಿ ಅವರಿಗೆ ಸಲ್ಲುತ್ತದೆ.

ಇಂದಿನ ಉದ್ಯೋಗಕೇಂದ್ರಿತ ಶಿಕ್ಷಣದ ನಡುವೆ ವಿದ್ಯಾರ್ಥಿಗಳಲ್ಲಿ ಕಲಾಸಕ್ತಿ ಬೆಳೆಸುವುದು ಸವಾಲಿನ ಕೆಲಸ. ಅದರಲ್ಲೂ ಕೃತಕ ಬುದ್ಧಿಮತ್ತೆ (ಎ.ಐ.) ಸೇರಿದಂತೆ ತಂತ್ರಜ್ಞಾನದ ವೇಗದ ಬೆಳವಣಿಗೆಯ ನಡುವೆಯೂ ಕಲೆಯ ಮಹತ್ವ ಕುಗ್ಗಿಲ್ಲ. ಮಾನವನ ಭಾವನೆ, ಅನುಭವ ಹಾಗೂ ಸೃಜನಶೀಲತೆಯಿಂದ ಹುಟ್ಟುವ ಕಲಾಕೃತಿಗೆ ತನ್ನದೇ ಆದ ಜೀವಂತಿಕೆ ಇದೆ. ಹೀಗಾಗಿ ಕಲಾವಿದರನ್ನು ರೂಪಿಸುವ ಕಾರ್ಯ ನಾಡಿನ ಸಾಂಸ್ಕೃತಿಕ ಆಸ್ತಿಯನ್ನು ಉಳಿಸುವ ಕೆಲಸವಾಗಿದೆ.

ಪ್ರಸ್ತುತ ಪ್ರಾ. ವಸಂತ ಅಕ್ಕಿ, ಪ್ರೊ. ಅಶೋಕ, ಶ್ರೀಮತಿ ಶಾರದಾ ಅಕ್ಕಿ ಹಾಗೂ ಪ್ರಕಾಶ ಅಕ್ಕಿ ಅವರ ಶ್ರಮದಿಂದ ವಿಜಯ ಕಲಾ ಮಂದಿರ ಕಲಾ ಪರಂಪರೆಯನ್ನು ಮುಂದುವರಿಸುತ್ತಿದೆ. ಸಂಸ್ಥೆಯ ಕಾರ್ಯದರ್ಶಿ ಪ್ರಕಾಶ ಅಕ್ಕಿ ಅವರ ಶಿಸ್ತು, ಸರಳತೆ ಹಾಗೂ ಸಮಾಜಮುಖಿ ಚಟುವಟಿಕೆಗಳು ಗಮನ ಸೆಳೆಯುತ್ತವೆ. ಕಲಾ ಮಹರ್ಷಿ ಟಿ.ಪಿ. ಅಕ್ಕಿಯವರ ಹೆಸರಿನ ಆರ್ಟ್ ಗ್ಯಾಲರಿಯಲ್ಲಿ ಕಲಾಕೃತಿಗಳನ್ನು ಅಚ್ಚುಕಟ್ಟಾಗಿ ಪ್ರದರ್ಶಿಸುವ ಮೂಲಕ ಕಲಾಸಕ್ತರಿಗೆ ಸುಂದರ ವಾತಾವರಣ ಕಲ್ಪಿಸಲಾಗಿದೆ.

ಇದೇ ಗ್ಯಾಲರಿಯಲ್ಲಿ ವಿಜಯ ಕಲಾ ಮಂದಿರ ಚಿತ್ರಕಲಾ ಮಹಾವಿದ್ಯಾಲಯದ ಬಿ.ವಿ.ಎ. ಅಂತಿಮ ವರ್ಷದ ವಿದ್ಯಾರ್ಥಿಗಳ ಸಮೂಹ ಚಿತ್ರಕಲಾ ಪ್ರದರ್ಶನ ಹಾಗೂ ಬೀಳ್ಕೊಡುಗೆ ಸಮಾರಂಭ ಆಯೋಜಿಸಲಾಗಿದೆ. ಅನ್ನಪೂರ್ಣ ಮಡ್ಡಿ, ಬಸವರಾಜ ಅಕ್ಕಿ, ವಿನಾಯಕ ಪಾಟೀಲ, ನಿವೇದಿತಾ ಪಟ್ಟೇದ ಹಾಗೂ ಶಂಕರ ಮುಡಿಯಜ್ಜನವರ ಕಲಾಕೃತಿಗಳು ಪ್ರದರ್ಶನದಲ್ಲಿವೆ.

ಅನ್ನಪೂರ್ಣ ಮಡ್ಡಿಯವರ ಮೈಸೂರ ಶೈಲಿಯ ಗೋಲ್ಡಲೀಫ್ ಸಾಂಪ್ರದಾಯಿಕ ಕಲಾಕೃತಿಗಳು, ಯಕ್ಷಗಾನದ ರಚನೆಗಳು, ಲಕ್ಷ್ಮೇಶ್ವರದ ಸೋಮೇಶ್ವರ ಮೂರ್ತಿ ಹಾಗೂ ಗಣೇಶನ ಚಿತ್ರಗಳು ಗಮನ ಸೆಳೆಯುತ್ತವೆ. ವಿನಾಯಕ ಪಾಟೀಲರ ಮೀನು ಮತ್ತು ಗಾಳ ಕಲಾಕೃತಿಯಲ್ಲಿ ಪೋಸ್ಟ್ ಇಂಪ್ರೆಷನಿಸಂನ ಪ್ರಭಾವ ಕಂಡುಬರುತ್ತದೆ. ಶಿವಶಂಕರರ ರೈತ ಕಲಾಕೃತಿ ರೈತನ ಬದುಕು, ಶ್ರಮ ಹಾಗೂ ಚೈತನ್ಯವನ್ನು ಬಿಂಬಿಸುತ್ತದೆ. ಸಾಂಪ್ರದಾಯಿಕ, ನವ್ಯ, ನೈಜ, ನಿಸರ್ಗ ಹಾಗೂ ಸಂಯೋಜನಾ ಶೈಲಿಯ ಹಲವು ಕಲಾಕೃತಿಗಳು ಪ್ರದರ್ಶನದಲ್ಲಿವೆ.

ಕಾರ್ಯಕ್ರಮವನ್ನು ಡಾ. ಸಿ.ಟಿ. ಗುರುಪ್ರಸಾದ, ಕುಲಸಚಿವರು, ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ ಉದ್ಘಾಟಿಸಲಿದ್ದಾರೆ. ಮಂಜುನಾಥ ಬಿ. ಅಬ್ಬಿಗೇರಿ, ಎಸ್.ಎಚ್. ಶಿವನಗೌಡರ ಹಾಗೂ ಶ್ರೀಮತಿ ಶಾರದಾ ವಿ. ಅಕ್ಕಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಶಹಜಾನ ಮುದಕವಿ ಹಾಗೂ ಪ್ರೊ. ಎಸ್. ಗುಂಜಾಳ ಅವರನ್ನು ಸನ್ಮಾನಿಸಲಾಗುವುದು.

ಕಲಾ ಮಹರ್ಷಿ ಟಿ.ಪಿ. ಅಕ್ಕಿಯವರ ಬೆವರಿನಿಂದ ಬೆಳೆದ ವಿಜಯ ಕಲಾ ಮಂದಿರ ಇಂದು ಹೊಸ ತಲೆಮಾರಿನ ಕಲಾವಿದರಿಗೆ ಆಶಾಕಿರಣವಾಗಿದೆ. ಎ.ಐ. ಯುಗದಲ್ಲೂ ಮಾನವ ಸೃಜನಶೀಲತೆಯ ಶಕ್ತಿ ಅಜೇಯವಾಗಿದ್ದು, ಕಲೆಯನ್ನು ಉಳಿಸುವ ಜವಾಬ್ದಾರಿ ಸಮಾಜದ ಪ್ರತಿಯೊಬ್ಬ ಕಲಾಸಕ್ತನ ಮೇಲಿದೆ.

**- ಬಸವರಾಜ ನೆಲಜೇರಿ, ಗದಗ**

ಸಂಕ್ಷಿಪ್ತ ಸುದ್ದಿಗಳು

## ವೀರೇಶ್ವರ ಪುಣ್ಯಾಶ್ರಮದ ಹುಂಡಿಯಲ್ಲಿ 6.36 ಲಕ್ಷ ರೂ. ನಗದು, 1.3 ಗ್ರಾಂ ಚಿನ್ನ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಶ್ರೀ ವೀರೇಶ್ವರ ಪುಣ್ಯಾಶ್ರಮದಲ್ಲಿ ಸುಮಾರು ಒಂದೂವರೆ ತಿಂಗಳಿನಿಂದ ಸಂಗ್ರಹವಾಗಿದ್ದ ಕಾಣಿಕೆ ಹುಂಡಿಗಳ ಎಣಿಕೆ ಕಾರ್ಯ ಆ.10ರಂದು ನೆರವೇರಿದ್ದು, ಒಟ್ಟು 6,36,616 ರೂ. ನಗದು ಹಾಗೂ 1.3 ಗ್ರಾಂ ಚಿನ್ನ ಸಂಗ್ರಹವಾಗಿರುವುದು ತಿಳಿದುಬಂದಿದೆ.

ಶ್ರೀ ವೀರೇಶ್ವರ ಪುಣ್ಯಾಶ್ರಮದ ಪ.ಪೂಜ್ಯ ಕಲ್ಲಯ್ಯಜ್ಜನವರ ಸಮ್ಮುಖದಲ್ಲಿ ಇದೇ ಮೊದಲ ಬಾರಿಗೆ ಟ್ರಸ್ಟಿಗಳು ಹಾಗೂ ಸಂಬಂಧಪಟ್ಟವರ ಉಪಸ್ಥಿತಿಯಲ್ಲಿ ಕಾಣಿಕೆ ಹುಂಡಿಗಳ ಎಣಿಕೆ ಕಾರ್ಯ ನಡೆಸಲಾಯಿತು. ಭಕ್ತರು ಸಲ್ಲಿಸಿದ್ದ ಕಾಣಿಕೆಗಳ ಎಣಿಕೆ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಯಿತು.

ಹುಂಡಿ ಎಣಿಕೆ ಸಂದರ್ಭದಲ್ಲಿ 1.3 ಗ್ರಾಂ ಚಿನ್ನದ ಜೊತೆಗೆ 6,36,616 ರೂ. ನಗದು ಸಂಗ್ರಹವಾಗಿರುವುದು ಲೆಕ್ಕಪತ್ರದಲ್ಲಿ ದಾಖಲಾಗಿದೆ.

ಎಣಿಕೆ ಕಾರ್ಯದಲ್ಲಿ ಶ್ರೀ ವೀರೇಶ್ವರ ಪುಣ್ಯಾಶ್ರಮದ ಸೋಲ್ ಟ್ರಸ್ಟ್ ಅಧ್ಯಕ್ಷ ನಿಂಗಪ್ಪ ಕೆಂಗಾರ, ಉಪಾಧ್ಯಕ್ಷ ಪ್ರಕಾಶ ಬಸರಿಗೆಡ, ಸಂಗಮೇಶ ದುಂದೂರ, ಶಿವರುದ್ರಪ್ಪ ಇಟಗಿ, ಪಿ.ಸಿ. ಹಿರೇಮಠ, ಚನ್ನಬಸಯ್ಯ ಬಂಕಾಪೂರಮಠ, ಪುಣ್ಯಾಶ್ರಮದ ಹಳೆಯ ವಿದ್ಯಾರ್ಥಿ ಸಾಧಕರ ಪ್ರತಿನಿಧಿ ಸಂದೀಪ ಸೇರಿದಂತೆ ಸಿಬ್ಬಂದಿ ವರ್ಗದವರು ಸಹಕರಿಸಿದರು.

ಭಕ್ತರು ಸಲ್ಲಿಸಿದ ಕಾಣಿಕೆಗಳ ಮೂಲಕ ಸಂಗ್ರಹವಾದ ಹಣ ಹಾಗೂ ಚಿನ್ನದ ವಿವರಗಳನ್ನು ಹುಂಡಿ ಎಣಿಕೆ ಕಾರ್ಯದ ಮೂಲಕ ದಾಖಲಿಸಲಾಗಿದೆ ಎಂದು ಪುಣ್ಯಾಶ್ರಮದ ಪ್ರಕಟಣೆ ತಿಳಿಸಿದೆ.

## ಲಯನ್ಸ್ ಕ್ಲಬ್‌ನಿಂದ ವ್ಹೀಲ್ ಚೇರ್ ದೇಣಿಗೆ



**ವಿಜಯಸಾಕ್ಷಿ ಸುದ್ದಿ, ಗದಗ**

ವಯೋಸಹಜ ನಿತ್ರಾಣ ಹಾಗೂ ಅಂಗವೈಕಲ್ಯದಿಂದ ನಡೆದಾಡಲಾಗದೆ ಮನೆಯಲ್ಲೇ ಕಾಲ ಕಳೆಯುತ್ತಿದ್ದ ಹುಡ್ಕೋ ಕಾಲೋನಿ ನಿವಾಸಿ ಶಾರದಾಬಾಯಿ ಬದಿ ಅವರ ನೆರವಿಗೆ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಧಾವಿಸಿದೆ. ಮನೆಯ ನಾಲ್ಕು ಗೋಡೆಗಳೇ ತನ್ನ ಪ್ರಪಂಚವಾಗಿದ್ದ ಶಾರದಾಬಾಯಿ ಅವರಿಗೆ ಇದೀಗ ವ್ಹೀಲ್‌ಚೇರ್ ಮೂಲಕ ಮತ್ತೆ ಹೊರಪ್ರಪಂಚ ನೋಡುವ ಅವಕಾಶ ದೊರೆತಿದೆ.

ಮಹೇಂದ್ರಕುಮಾರ ಸಂಗಾನಿ ಅವರು ಕೊಡುಗೆಯಾಗಿ ನೀಡಿದ ವ್ಹೀಲ್‌ಚೇರ್ ಅನ್ನು ಲಯನ್ಸ್ ಕ್ಲಬ್ ಸದಸ್ಯರು ಶಾರದಾಬಾಯಿ ಅವರ ಮನೆಗೆ ತೆರಳಿ ಹಸ್ತಾಂತರಿಸಿದರು. ವ್ಹೀಲ್‌ಚೇರ್ ಪಡೆದ ಬಳಿಕ ಅವರ ಮುಖದಲ್ಲಿ ಮೂಡಿದ ನಗು, ನೆರವಿನ ಕಾರ್ಯಕ್ಕೆ ಸಾರ್ಥಕತೆ ತಂದಿತು. ಕ್ಲಬ್ ಅಧ್ಯಕ್ಷ ಪ್ರವೀಣ ವಾರಕರ ಅವರ ನೇತೃತ್ವದಲ್ಲಿ ನಡೆದ ವಿತರಣಾ ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಲಿಂಗರಾಜ ತೋಟದ, ಖಜಾಂಚಿ ರೇಣುಕಪ್ರಸಾದ ಶಿಗ್ಲಿಮಠ, ದತ್ತು ಬೇವಿನಕಟ್ಟಿ, ಸಂತೋಷ ಕಬಾಡರ, ಶಿವಪ್ರಭು ನೀಲಗುಂದ ಸೇರಿದಂತೆ ಕ್ಲಬ್ ಸದಸ್ಯರು ಉಪಸ್ಥಿತರಿದ್ದರು.

## ಅಗಡಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಗ್ರಂಥಪಾಲಕರ ದಿನಾಚರಣೆ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಅಗಡಿ ಎಂಜಿನಿಯರಿಂಗ್ ಕಾಲೇಜಿನ ಪ್ರೊ. ವೆಂಕಟ ಸುಬ್ಬಾ ಶೆಟ್ಟಿ ಗ್ರಂಥಾಲಯದಲ್ಲಿ ಗ್ರಂಥಾಲಯ ಮಾಹಿತಿ ವಿಜ್ಞಾನ ಕ್ಷೇತ್ರದ ಪಿತಾಮಹ ಪದ್ಮಶ್ರೀ ಡಾ. ಎಸ್.ಆರ್. ರಂಗನಾಥನ್ ಅವರ 134ನೇ ಜನ್ಮದಿನದ ಅಂಗವಾಗಿ ಗ್ರಂಥಪಾಲಕರ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಗ್ರಂಥಾಲಯಗಳ ಮಹತ್ವ, ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಯಲ್ಲಿ ಗ್ರಂಥಪಾಲಕರ ಪಾತ್ರ ಹಾಗೂ ಪುಸ್ತಕ ಓದುವ ಹವ್ಯಾಸ ಬೆಳೆಸುವ ಅಗತ್ಯದ ಕುರಿತು ಚರ್ಚಿಸಲಾಯಿತು. ಜ್ಞಾನಾರ್ಜನೆಗೆ ಗ್ರಂಥಾಲಯಗಳು ಪ್ರಮುಖ ಕೇಂದ್ರಗಳಾಗಿದ್ದು, ವಿದ್ಯಾರ್ಥಿಗಳು ಪಠ್ಯಪುಸ್ತಕಗಳ ಜತೆಗೆ ವಿವಿಧ ವಿಷಯಗಳ ಪುಸ್ತಕಗಳನ್ನು ಓದುವ ಮೂಲಕ ತಮ್ಮ ಜ್ಞಾನವನ್ನು ವಿಸ್ತರಿಸಿಕೊಳ್ಳಬೇಕು ಎಂದು ತಿಳಿಸಲಾಯಿತು.

ಡಾ. ಎಸ್.ಆರ್. ರಂಗನಾಥನ್ ಅವರು ಗ್ರಂಥಾಲಯ ಕ್ಷೇತ್ರಕ್ಕೆ ನೀಡಿದ ಅಮೂಲ್ಯ ಕೊಡುಗೆ ಹಾಗೂ ಅವರ ಸೇವೆಯನ್ನು ಸ್ಮರಿಸಲಾಯಿತು. ಅವರ ತತ್ವಗಳು ಇಂದಿಗೂ ಗ್ರಂಥಾಲಯಗಳ ಅಭಿವೃದ್ಧಿಗೆ ಮಾರ್ಗದರ್ಶಿಯಾಗಿವೆ ಎಂದು ಅಭಿಪ್ರಾಯ ವ್ಯಕ್ತವಾಯಿತು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯ ಡಾ. ಪರಶುರಾಮ ಬಾರ್ಕಿ, ಡೀನ್ ಅಕಾಡೆಮಿಕ್ಸ್ ಡಾ. ಸುಭಾಸ್ ಮೇಟಿ, ಆಡಳಿತಾಧಿಕಾರಿ ವಿಕ್ರಂ ಶಿರೋಳ, ವಿವಿಧ ವಿಭಾಗಗಳ ಮುಖ್ಯಸ್ಥರು, ಸಹಾಯಕ ಗ್ರಂಥಪಾಲಕರಾದ ಜಗದೀಶ್ ಶಿಗ್ಲಿಮಠ, ವೀರಯ್ಯ ಬಾಳೂರುಮಠ ಹಾಗೂ ಗ್ರಂಥಾಲಯದ ಸಿಬ್ಬಂದಿ ಉಪಸ್ಥಿತರಿದ್ದರು. ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು.

### ಸರ್ಕಾರಿ ಕೆಲಸ ದೇವರ ಕೆಲಸವೆಂಬುದನ್ನು ಅರಿತು ಜನರೊಂದಿಗೆ ಮಾನವೀಯವಾಗಿ ವರ್ತಿಸಿ: ಡಿಸಿ ಶ್ರೀಧರ್

# ಕಡತದ ಹಿಂದೆ ಇರುವ ನೋವನ್ನು ಅರ್ಥಮಾಡಿಕೊಳ್ಳಿ

**ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಸರ್ಕಾರಿ ಕೆಲಸ ದೇವರ ಕೆಲಸ ಎಂಬುದನ್ನು ಅಕ್ಷರಶಃ ಪಾಲಿಸುವ ಮೂಲಕ ಸಾರ್ವಜನಿಕರೊಂದಿಗೆ ಸೌಜನ್ಯ, ಪ್ರಾಮಾಣಿಕತೆ ಮತ್ತು ಮಾನವೀಯತೆಯಿಂದ ವರ್ತಿಸಬೇಕು.

ಜನರ ಸಮಸ್ಯೆಗಳನ್ನು ಕೇವಲ ಕಡತ, ಅರ್ಜಿ ಅಥವಾ ದಾಖಲೆಗಳಾಗಿ ನೋಡದೆ, ಅವುಗಳ ಹಿಂದೆ ಇರುವ ನೋವು, ಸಂಕಷ್ಟ ಹಾಗೂ ಅಗತ್ಯವನ್ನು ಅರ್ಥಮಾಡಿಕೊಂಡು ಸ್ಪಂದಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕರೆ ನೀಡಿದರು.

ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಶನಿವಾರ ನಡೆದ 80ನೇ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಸರ್ಕಾರಿ ಸೇವೆಯ ಮಹತ್ವ, ಅಧಿಕಾರಿಗಳ ಜವಾಬ್ದಾರಿ ಹಾಗೂ ಜನಸ್ನೇಹಿ ಆಡಳಿತದ ಅಗತ್ಯವನ್ನು ಒತ್ತಿ ಹೇಳಿದರು.

ಭಾರತಕ್ಕೆ ಸ್ವಾತಂತ್ರ್ಯ ದೊರೆತ ಐತಿಹಾಸಿಕ ಸಂದರ್ಭವನ್ನು ಸ್ಮರಿಸಿದ ಜಿಲ್ಲಾಧಿಕಾರಿ, ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನ ಹಾಗೂ ದೇಶ ನಿರ್ಮಾಣಕ್ಕಾಗಿ ಅಂದಿನ ವಿದ್ವಾಂಸರು ಮತ್ತು





ಪಂಡಿತರು ನೀಡಿದ ಸಲಹೆ-ಸೂಚನೆಗಳನ್ನು ನೆನಪಿಸಿಕೊಂಡರು.

ದೇಶ ನಿರ್ಮಾಣದ ಕಾರ್ಯದಲ್ಲಿ ದೇಶಭಕ್ತಿ, ಕರ್ತವ್ಯನಿಷ್ಠೆ ಹಾಗೂ ದೈವಬಲದ ಮೇಲಿನ ನಂಬಿಕೆ ಪ್ರತಿಯೊಬ್ಬರಲ್ಲೂ ಇರಬೇಕು. ಸರ್ಕಾರಿ ನೌಕರಿ ದೊರೆಯುವುದು ಕೇವಲ ಉದ್ಯೋಗವಲ್ಲ, ಅದು ದೊಡ್ಡ ಅವಕಾಶದ ಜೊತೆಗೆ ಮಹತ್ವದ ಜವಾಬ್ದಾರಿಯಾಗಿದೆ.

ಕೋಟ್ಯಂತರ ಜನಸಂಖ್ಯೆಯಲ್ಲಿ ಕೆಲವೇ ಲಕ್ಷ ಮಂದಿಗೆ ಸರ್ಕಾರಿ ಸೇವೆ ಸಲ್ಲಿಸುವ ಅವಕಾಶ ದೊರೆತಿದೆ. ಹೀಗಾಗಿ, ಸಮಾಜ ನಮಗೆ ಏನು ಕೊಟ್ಟಿದೆ? ಎನ್ನುವುದಕ್ಕಿಂತ ಸಮಾಜಕ್ಕೆ ನಾವು ಏನು ಕೊಟ್ಟಿದ್ದೇವೆ? ಎಂದು ಪ್ರತಿಯೊಬ್ಬ ಸರ್ಕಾರಿ ನೌಕರರೂ ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದರು.

ತಮ್ಮ ಸಮಸ್ಯೆಗಳನ್ನು ಹೊತ್ತು ಸರ್ಕಾರಿ ಕಚೇರಿಗಳಿಗೆ ಬರುವ ಸಾರ್ವಜನಿಕರೊಂದಿಗೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಸೌಜನ್ಯದಿಂದ ವರ್ತಿಸಬೇಕು. ಜನರೊಂದಿಗೆ ನಾಲ್ಕು ಹಿತನುಡಿಗಳನ್ನು ಆಡಿದರೂ ಅವರ ಅರ್ಧ ಸಮಸ್ಯೆ ಪರಿಹಾರವಾದಂತಾಗುತ್ತದೆ.

ಸಾರ್ವಜನಿಕರ ಸಮಸ್ಯೆಗಳನ್ನು ತಾಳ್ಮೆಯಿಂದ ಆಲಿಸಿ, ಸಾಧ್ಯವಾದಷ್ಟು ಶೀಘ್ರವಾಗಿ ಸ್ಪಂದಿಸುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದರು.

> ನಮ್ಮಲ್ಲಿ ಮನುಷ್ಯತ್ವ ತುಂಬಿದ್ದರೆ, ನಾವು ಮಾಡುವ ಪ್ರತಿಯೊಂದು ಕೆಲಸದಲ್ಲೂ ಅದು ಪ್ರತಿಫಲಿಸುತ್ತದೆ. ಸರ್ಕಾರ ನಮಗೆ ನೀಡಿರುವ ಅಧಿಕಾರವನ್ನು ಸಮಾಜಕ್ಕೆ ಮರುಪಾವತಿ ಮಾಡುವ ಸೇವಾ ಮನೋಭಾವದಿಂದ ಬಳಸಿಕೊಳ್ಳೋಣ.
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

ಸಾರ್ವಜನಿಕರ ದೃಷ್ಟಿಯಲ್ಲಿ ಪ್ರತಿಯೊಬ್ಬ ಸರ್ಕಾರಿ ನೌಕರನೂ ಸರ್ಕಾರದ ಪ್ರತಿನಿಧಿ. ನೌಕರರು ಮಾಡುವ ಸಣ್ಣ ಸಹಾಯವೂ ಸರ್ಕಾರದ ಮೇಲಿನ ಜನರ ನಂಬಿಕೆಯನ್ನು ಹೆಚ್ಚಿಸುತ್ತದೆ. ಎಂದು ಅವರು ಹೇಳಿದರು.

ಜನರ ಸಮಸ್ಯೆಗಳನ್ನು ಕೇವಲ ಕಡತ, ಅರ್ಜಿ ಅಥವಾ ದಾಖಲೆಗಳ ರೂಪದಲ್ಲಿ ನೋಡಬಾರದು. ಆ ಕಡತದ ಹಿಂದೆ ಒಬ್ಬ ವ್ಯಕ್ತಿಯ ನೋವು, ಸಂಕಷ್ಟ ಮತ್ತು ಅಗತ್ಯವಿರುತ್ತದೆ.

ಅದನ್ನು ಅರ್ಥಮಾಡಿಕೊಂಡು ಮಾನವೀಯತೆಯಿಂದ ಸ್ಪಂದಿಸುವ ಮನೋಭಾವ ಅಧಿಕಾರಿಗಳು ಹಾಗೂ ಸಿಬ್ಬಂದಿಯಲ್ಲಿ ಇರಬೇಕು ಎಂದು ಸಿ.ಎನ್. ಶ್ರೀಧರ್ ಹೇಳಿದರು.

ಅಧಿಕಾರ ಮತ್ತು ಹುದ್ದೆಯನ್ನು ಜನಸೇವೆಗೆ ಬಳಸಿಕೊಳ್ಳಬೇಕು. ಜನರ ಸೇವೆ ಮಾಡುವ ಮೂಲಕ ಪುಣ್ಯ ಸಂಪಾದಿಸುವ ಅಪೂರ್ವ ಅವಕಾಶ ಸರ್ಕಾರಿ ಸೇವೆಯಲ್ಲಿದೆ.

ಸಮಾಜದಿಂದ ಪಡೆಯುವುದಕ್ಕಿಂತ ಸಮಾಜಕ್ಕೆ ನೀಡುವುದರಲ್ಲಿ ಹೆಚ್ಚಿನ ಸಂತೃಪ್ತಿ ದೊರೆಯುತ್ತದೆ ಎಂದರು.

ದೇಶದ ಅಭಿವೃದ್ಧಿ ಹಾಗೂ ಜನಕಲ್ಯಾಣಕ್ಕಾಗಿ ಪ್ರತಿಯೊಬ್ಬ ಸರ್ಕಾರಿ ನೌಕರರೂ ಪ್ರಾಮಾಣಿಕತೆ, ಕರ್ತವ್ಯನಿಷ್ಠೆ, ಸೌಜನ್ಯ ಮತ್ತು ಮಾನವೀಯತೆಯಿಂದ ಕಾರ್ಯನಿರ್ವಹಿಸುವ ಸಂಕಲ್ಪ ಮಾಡಬೇಕು ಎಂದು ಜಿಲ್ಲಾಧಿಕಾರಿ ಕರೆ ನೀಡಿದರು.

ಜಿಲ್ಲಾಡಳಿತದ ಆವರಣದಲ್ಲಿ ನಡೆದ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ಪಂಚಾಯಿತಿ ಕಾರ್ಯದರ್ಶಿ ಎಸ್.ಎಸ್. ಮುಂಡರಗಿ, ಸರ್ಕಾರಿ ನೌಕರರ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸರ್ಕಾರಿ ನೌಕರರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

### ನಾನು ಬದಲಾಗುತ್ತೇನೆಸಮಾಜವನ್ನು ಬದಲಾಯಿಸುತ್ತೇನೆ ಎಂಬ ಧ್ಯೇಯದೊಂದಿಗೆ ಮುನ್ನಡೆಯಲಿ ಯುವಶಕ್ತಿ

## ಯುವ ಸಂಕಲ್ಪದಿಂದಲೇ ನವ ಭಾರತ ನಿರ್ಮಾಣ ಸಾಧ್ಯ





**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಭಾರತದ ಭವಿಷ್ಯವನ್ನು ರೂಪಿಸುವಲ್ಲಿ ಯುವಜನತೆಯ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಯುವಕರು ತಮ್ಮ ಜ್ಞಾನ, ಪ್ರತಿಭೆ, ಶಕ್ತಿ ಹಾಗೂ ಸೃಜನಶೀಲತೆಯನ್ನು ದೇಶದ ಅಭಿವೃದ್ಧಿಗೆ ಸಮರ್ಪಿಸುವ ಸಂಕಲ್ಪ ಮಾಡಬೇಕು. ಯುವಕರಲ್ಲಿ ರಾಷ್ಟ್ರಪ್ರೇಮ, ಸಾಮಾಜಿಕ ಜವಾಬ್ದಾರಿ, ಸೇವಾ ಮನೋಭಾವ ಹಾಗೂ ನಾಯಕತ್ವದ ಗುಣಗಳನ್ನು ಬೆಳೆಸುವ ಮೂಲಕ ನವ ಭಾರತದ ನಿರ್ಮಾಣದ ಕನಸನ್ನು ನನಸಾಗಿಸಬಹುದು ಎಂದು ಶಿಕ್ಷಕ ಹಾಗೂ ವಾಗ್ಮಿ ಕಿರಣ ರಾಮ್ ಹೇಳಿದರು.

ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ. ಅಗಡಿ ಇಂಜಿನಿಯರಿಂಗ್ ಮಹಾವಿದ್ಯಾಲಯದಲ್ಲಿ ಎನ್‌ಎಸ್‌ಎಸ್ ಘಟಕದ 202627ನೇ ಸಾಲಿನ ಚಟುವಟಿಕೆಗಳ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಭಾರತ ಅಪಾರ ಯುವಶಕ್ತಿಯನ್ನು ಹೊಂದಿರುವ ರಾಷ್ಟ್ರವಾಗಿದೆ. ಈ ಶಕ್ತಿಯನ್ನು ಸಕಾರಾತ್ಮಕವಾಗಿ ಬಳಸಿಕೊಳ್ಳುವುದು ವ್ಯಕ್ತಿತ್ವ ನಿರ್ಮಾಣದ ಜತೆಗೆ ರಾಷ್ಟ್ರ ನಿರ್ಮಾಣಕ್ಕೂ ಅಗತ್ಯವಾಗಿದೆ ಎಂದರು.

ಗುಣಮಟ್ಟದ ಶಿಕ್ಷಣದ ಜತೆಗೆ ಕೌಶಲ್ಯಾಭಿವೃದ್ಧಿ, ನವೋದ್ಯಮ, ಉದ್ಯಮಶೀಲತೆ, ತಂತ್ರಜ್ಞಾನ ಜ್ಞಾನ, ಪರಿಸರ ಸಂರಕ್ಷಣೆ ಹಾಗೂ ಸಾಮಾಜಿಕ ಸೇವೆಯಲ್ಲಿ ಯುವಕರು ತೊಡಗಿಸಿಕೊಳ್ಳಬೇಕು. ಜ್ಞಾನ ಮತ್ತು ಪ್ರತಿಭೆಯನ್ನು ಸಮಾಜದ ಅಭಿವೃದ್ಧಿಗೆ ಬಳಸುವ ಮೂಲಕ ದೇಶದ ಪ್ರಗತಿಗೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದರು.

> ನಾನು ಬದಲಾಗುತ್ತೇನೆ ಸಮಾಜವನ್ನು ಬದಲಾಯಿಸುತ್ತೇನೆ ಎಂಬ ಸಂಕಲ್ಪದೊಂದಿಗೆ ಯುವಕರು ಮುನ್ನಡೆಯಬೇಕು. ತಮ್ಮ ಸಾಮರ್ಥ್ಯವನ್ನು ವೈಯಕ್ತಿಕ ಯಶಸ್ಸಿಗೆ ಮಾತ್ರ ಸೀಮಿತಗೊಳಿಸದೆ ಸಮಾಜದ ಒಳಿತಿಗೂ ಬಳಸಿದಾಗ ಯುವಶಕ್ತಿಯ ನಿಜವಾದ ಅರ್ಥ ಸಾರ್ಥಕವಾಗುತ್ತದೆ.
> – ಕಿರಣ ರಾಮ್, ಶಿಕ್ಷಕ ಹಾಗೂ ವಾಗ್ಮಿ

ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ಮಾತನಾಡಿ, ಸ್ವಚ್ಛತೆ, ಪರಿಸರ ಸಂರಕ್ಷಣೆ, ರಕ್ತದಾನ, ಗ್ರಾಮೀಣ ಅಭಿವೃದ್ಧಿ, ಸಾಕ್ಷರತೆ, ಸಾಮಾಜಿಕ ಜಾಗೃತಿ, ರಾಷ್ಟ್ರೀಯ ಏಕತೆ ಸೇರಿದಂತೆ ವಿವಿಧ ಸೇವಾ ಚಟುವಟಿಕೆಗಳಲ್ಲಿ ಯುವಕರು ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದರು.


ಎನ್‌ಎಸ್‌ಎಸ್ ಘಟಕವು ಯುವಕರಲ್ಲಿ ಸ್ವಯಂಸೇವಾ ಮನೋಭಾವ, ನಾಯಕತ್ವ, ಅನುಭವಾಧಾರಿತ ಕಲಿಕೆ ಹಾಗೂ ಸಾಮಾಜಿಕ ಜವಾಬ್ದಾರಿಯ ಅರಿವು ಮೂಡಿಸಲು ಉತ್ತಮ ವೇದಿಕೆಯಾಗಿದೆ. ಜ್ಞಾನ, ಕೌಶಲ್ಯ ಮತ್ತು ಮೌಲ್ಯಗಳ ಸಮನ್ವಯವೇ ಯುವ ಸಂಕಲ್ಪದ ಆಧಾರ. ಪ್ರಾಮಾಣಿಕತೆ, ಶಿಸ್ತು, ಸಮಯಪಾಲನೆ, ಪರಿಶ್ರಮ, ಸಹಬಾಳ್ವೆ, ಮಾನವೀಯತೆ ಹಾಗೂ ದೇಶಪ್ರೇಮವನ್ನು ಜೀವನದಲ್ಲಿ ಅಳವಡಿಸಿಕೊಂಡ ಯುವಜನತೆ ಬಲಿಷ್ಠ ಸಮಾಜದ ನಿರ್ಮಾತೃಗಳಾಗುತ್ತಾರೆ ಎಂದು ಹೇಳಿದರು.

ಸಮಾರಂಭದಲ್ಲಿ ಮಹಾವಿದ್ಯಾಲಯದ ಆಡಳಿತಾಧಿಕಾರಿ ಪ್ರೊ. ವಿಕ್ರಂ ಶಿರೋಳ್, ಪ್ರಥಮ ವರ್ಷದ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಡಾ. ಗಿರೀಶ್ ಯತ್ತಿನಹಳ್ಳಿ, ಪ್ರೊ. ದಯಾನಂದ ಬಡಿಗಣ್ಣವರ, ಎನ್‌ಎಸ್‌ಎಸ್ ಅಧಿಕಾರಿ ಪ್ರೊ. ಸೋಮಶೇಖರ ಕೆರಿಮನಿ, ಪ್ರೊ. ಷಣ್ಮುಖ ಜಿ. ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಪ್ರಥಮ ವರ್ಷದ ಇಂಜಿನಿಯರಿಂಗ್ ವಿದ್ಯಾರ್ಥಿಗಳನ್ನು ಎನ್‌ಎಸ್‌ಎಸ್ ಘಟಕಕ್ಕೆ ಸ್ವಾಗತಿಸಲಾಯಿತು. ಸ್ವಯಂಸೇವಕರಾದ ಅಭಿಷೇಕ ಕಣವಿ, ಶ್ರೀಲಕ್ಷ್ಮಿ ಪಾಟೀಲ್, ಸ್ಮಿತಾ ದಳವಾಯಿ, ಅಕ್ಷತಾ ಹಡಪದ ಹಾಗೂ ಚೇತನ್ ಗಣೇಶ್ ಬನ್ನಿಮಟ್ಟಿ ಕಾರ್ಯಕ್ರಮ ನಿರ್ವಹಿಸಿದರು.

### ಅಸಮಾನತೆ, ಕಂದಾಚಾರ ಪ್ರಶ್ನಿಸಿದ ವಚನಕಾರ್ತಿಯರು: ಡಾ. ನೀಲಮ್ಮತಾಯಿ ಅಸುಂಡಿ

## ವಚನಕಾರ್ತಿಯರ ನುಡಿಯಲ್ಲಿ ಸಮಾನತೆಯ ದೀವಿಗೆ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ವಚನ ಸಾಹಿತ್ಯ ಕೇವಲ ಸಾಹಿತ್ಯದ ಪ್ರಕಾರವಲ್ಲ, ಅದು ಸಾಮಾಜಿಕ ಪರಿವರ್ತನೆಯ ಶಕ್ತಿಶಾಲಿ ಮಾಧ್ಯಮ. ವಚನಕಾರ್ತಿಯರು ತಮ್ಮ ಅಂತರಂಗದ ಅನುಭವ, ಆತ್ಮಾಭಿಮಾನ ಹಾಗೂ ವೈಚಾರಿಕ ಪ್ರಜ್ಞೆಯ ಮೂಲಕ ಅಸಮಾನತೆ, ಕಂದಾಚಾರ ಮತ್ತು ತಾರತಮ್ಯಗಳನ್ನು ಪ್ರಶ್ನಿಸಿ, ಸಮಾನತೆ ಹಾಗೂ ಮಾನವೀಯತೆಯ ದೀವಿಗೆಯನ್ನು ಬೆಳಗಿಸಿದ್ದಾರೆ ಎಂದು ಪೂಜ್ಯ ಶಿವಶರಣೆ ಡಾ. ನೀಲಮ್ಮತಾಯಿ ಅಸುಂಡಿ ಹೇಳಿದರು.

ಲಕ್ಷ್ಮೇಶ್ವರದ ಅಕ್ಕಮಹಾದೇವಿ ದೇವಸ್ಥಾನದಲ್ಲಿ ಶುಕ್ರವಾರ ನಡೆದ ಶ್ರಾವಣ ಸಂಜೆ ಕಾರ್ಯಕ್ರಮದಲ್ಲಿ ಶ್ರೀಮತಿ ಲಲಿತಾ ಕೆರಿಮನಿ ಹಾಗೂ ಶ್ರೀಮತಿ ಮೇಘಾ ಹುಕ್ಕೇರಿ ಸಂಪಾದಿಸಿರುವ ಸಮಾನತೆ ಸಾರಿದ ವಚನಕಾರ್ತಿಯರು ಕೃತಿ ಬಿಡುಗಡೆ ಸಮಾರಂಭದಲ್ಲಿ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ವಚನಕಾರ್ತಿಯರ ನುಡಿಗಳು ಅಂದಿನ ಸಾಮಾಜಿಕ ವ್ಯವಸ್ಥೆಗೆ ಕನ್ನಡಿ ಹಿಡಿದಿದ್ದಲ್ಲದೆ, ಮಹಿಳೆಯ ಅಸ್ತಿತ್ವ, ಸ್ವಾಭಿಮಾನ ಹಾಗೂ ಆತ್ಮಗೌರವದ ಪ್ರತೀಕವಾಗಿವೆ.

ತಮ್ಮ ಅನುಭವದ ನೆಲೆಯಲ್ಲಿ ಕಟ್ಟಿಕೊಟ್ಟ ವಿಚಾರಗಳನ್ನು ಕಾಲದ ಗಡಿಯನ್ನು ದಾಟಿಸಿ ಇಂದಿಗೂ ಸಮಾಜಕ್ಕೆ ದಾರಿದೀಪವಾಗಿಸಿದ್ದಾರೆ.

ಮಹಿಳೆಯರಿಗೆ ಸಮಾನ ಅವಕಾಶ, ಗೌರವ ಹಾಗೂ ಸ್ವಾತಂತ್ರ್ಯ ದೊರೆಯಬೇಕೆಂಬ ಆಶಯವನ್ನು ಅವರು ಶತಮಾನಗಳ ಹಿಂದೆಯೇ ಪ್ರತಿಪಾದಿಸಿದ್ದರು ಎಂದರು.

> ಮಹಿಳಾ ಸಾಹಿತ್ಯವನ್ನು ಕೇವಲ ಮಹಿಳೆಯರ ಸಾಹಿತ್ಯವೆಂದು ಸೀಮಿತಗೊಳಿಸದೆ, ಅದು ಸಮಾಜದ ಸಮಗ್ರ ಚಿಂತನೆಯ ಭಾಗ ಎಂಬ ಅರಿವು ಮೂಡಿಸಬೇಕು.
> – ಪ್ರತಿಮಾ ಮಹಾಜನಶೆಟ್ಟರ

ಶ್ರಾವಣ ಸಂಜೆ ಕಾರ್ಯಕ್ರಮ ಎರಡು ದಶಕಗಳನ್ನು ಪೂರೈಸಿರುವ ಸವಿನೆನಪಿನಲ್ಲಿ ಸಮಾನತೆ ಸಾರಿದ ವಚನಕಾರ್ತಿಯರು ಕೃತಿ ಹೊರತಂದಿರುವುದು ಅರ್ಥಪೂರ್ಣ ಹಾಗೂ ಅಭಿನಂದನೀಯ ಕಾರ್ಯವಾಗಿದೆ. ವಚನಕಾರ್ತಿಯರ ಚಿಂತನೆಗಳನ್ನು ಒಂದೆಡೆ ದಾಖಲಿಸಿ,

ಮುಂದಿನ ಪೀಳಿಗೆಗೆ ಪರಿಚಯಿಸುವ ಮೂಲಕ ಕೃತಿಯ ಸಂಪಾದಕರು ಸಾಹಿತ್ಯಿಕ ಹಾಗೂ ಸಾಮಾಜಿಕ ಹೊಣೆಗಾರಿಕೆ ಮೆರೆದಿದ್ದಾರೆ ಎಂದು ಡಾ. ನೀಲಮ್ಮತಾಯಿ ಅಸುಂಡಿ ಶ್ಲಾಘಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರತಿಮಾ ಮಹಾಜನಶೆಟ್ಟರ ಮಾತನಾಡಿ, ವಚನಕಾರ್ತಿಯರ ಸಾಹಿತ್ಯದಲ್ಲಿರುವ ವೈಚಾರಿಕತೆ, ಸಾಮಾಜಿಕ ಕಳಕಳಿ ಹಾಗೂ ಮಾನವೀಯ ಮೌಲ್ಯಗಳನ್ನು ಇಂದಿನ ಯುವ ಪೀಳಿಗೆಗೆ ಪರಿಚಯಿಸುವ ಅಗತ್ಯವಿದೆ ಎಂದರು.

ಕೃತಿ ಬಿಡುಗಡೆ ಸಮಾರಂಭದಲ್ಲಿ ಶಕುಂತಲಾ ತಟ್ಟಿ, ಕುಸುಮಾ ಮಲ್ಲಾಡದ, ನೀಲಕ್ಕ ಬೂದಿಹಾಳ, ಕಾಂಚನಮಾಲಾ ಹಸರೆಡ್ಡಿ, ಲತಾ ಎಸ್. ತಟ್ಟಿ, ಅರುಂಧತಿ ಬಿಂಕದಕಟ್ಟಿ, ನಿರ್ಮಲಾ ಅರಳಿ, ಶಾಂತಾ ಗುಳಗಣ್ಣವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ವಚನಗಳ ವೈಚಾರಿಕ ಪರಂಪರೆ, ಮಹಿಳಾ ಸಮಾನತೆಯ ಆಶಯ ಹಾಗೂ ಸಾಮಾಜಿಕ ನ್ಯಾಯದ ಸಂದೇಶಗಳ ಕುರಿತು ಚಿಂತನ-ಮಂಥನ ನಡೆಯಿತು.

ವಚನಕಾರ್ತಿಯರ ವಿಚಾರಧಾರೆ ಇಂದಿನ ಸಮಾಜದಲ್ಲಿ ಮತ್ತಷ್ಟು ಪ್ರಸ್ತುತವಾಗಿದ್ದು, ಅವರ ಸಂದೇಶಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳುವ ಅಗತ್ಯವನ್ನು ಗಣ್ಯರು ಪ್ರತಿಪಾದಿಸಿದರು.

ಪೂಜ್ಯ ಶ್ರೀ ಸಿದ್ದೇಶ್ವರ ಸತ್ಸಂಗ ಬಳಗ, ಗದಗ ಜಿಲ್ಲಾ ಹಾಗೂ ಲಕ್ಷ್ಮೇಶ್ವರ ತಾಲೂಕು ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ, ರಾಜ-ರಾಜೇಶ್ವರಿ ಮಹಿಳಾ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ, ಅಕ್ಕಮಹಾದೇವಿ ಬಳಗ, ಪ್ರೇಮಕ್ಕಾ ಅಭಿಮಾನ ಬಳಗ ಹಾಗೂ ವಿವಿಧ ಸಂಘಟನೆಗಳ ಸಹಯೋಗದಲ್ಲಿ ಕಾರ್ಯಕ್ರಮ ಅರ್ಥಪೂರ್ಣವಾಗಿ ಜರುಗಿತು.

## ಕಾಂಗ್ರೆಸ್ ಸಂಪುಟದಲ್ಲಿ ಭ್ರಷ್ಟರ ದರ್ಬಾರ್: ವಿಜಯಕುಮಾರ ಗಡ್ಡಿ

**ವಿಜಯಸಾಕ್ಷಿ ಸುದ್ದಿ, ಗದಗ**

ಹಲವು ಸುತ್ತಿನ ಕಸರತ್ತು, ಚರ್ಚೆಗಳ ಬಳಿಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಸಚಿವ ಸಂಪುಟ ವಿಸ್ತರಣೆ ಮಾಡಿದ್ದು, ಹೊಸ ಸಂಪುಟದಲ್ಲಿ ಭ್ರಷ್ಟಾಚಾರ ಹಾಗೂ ಅಸಮರ್ಥತೆಯ ಆರೋಪ ಎದುರಿಸುತ್ತಿರುವವರಿಗೇ ಮಣೆ ಹಾಕಲಾಗಿದೆ ಎಂದು ಬಿಜೆಪಿ ಮುಖಂಡ ಹಾಗೂ ಉದ್ಯಮಿದಾರ ವಿಜಯಕುಮಾರ ಗಡ್ಡಿ ಆರೋಪಿಸಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ವಾಲ್ಮೀಕಿ ನಿಗಮದ ಹಣ ದುರುಪಯೋಗ ಪ್ರಕರಣದಲ್ಲಿ ₹187 ಕೋಟಿ ಅಕ್ರಮದ ಆರೋಪ ಎದುರಿಸಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ಬಿ. ನಾಗೇಂದ್ರ ಅವರನ್ನು ಮತ್ತೆ ಸಚಿವ ಸಂಪುಟಕ್ಕೆ ಸೇರಿಸಿಕೊಂಡಿರುವುದು ಕಾಂಗ್ರೆಸ್ ಸರ್ಕಾರದ ನಾಚಿಕೆಗೇಡಿತನಕ್ಕೆ ಸಾಕ್ಷಿ ಎಂದು ಟೀಕಿಸಿದ್ದಾರೆ.

ಇಡೀ ರಾಜ್ಯದ ಜನರು ಛೀಮಾರಿ ಹಾಕಿದರೂ ಆರೋಪ ಎದುರಿಸುತ್ತಿರುವವರನ್ನೇ ಮತ್ತೆ ಸಂಪುಟಕ್ಕೆ ಸೇರಿಸಿಕೊಳ್ಳುತ್ತಿರುವುದು ಕಾಂಗ್ರೆಸ್ ಸರ್ಕಾರದ ನಡೆ ಎಷ್ಟು ಗಂಭೀರವಾಗಿದೆ ಎಂಬುದನ್ನು ತೋರಿಸುತ್ತದೆ. ಎಂದು ಗಡ್ಡಿ ಹೇಳಿದ್ದಾರೆ. ಕಾರ್ಮಿಕ ಇಲಾಖೆಯ ಕಲ್ಯಾಣ ನಿಧಿ ದುರುಪಯೋಗ ಹಾಗೂ ಹೆಲ್ತ್ ಕಿಟ್ ಹಗರಣಕ್ಕೆ ಸಂಬಂಧಿಸಿದಂತೆ ಆರೋಪಗಳು ಕೇಳಿಬಂದಿದ್ದರೂ ಸಂತೋಷ್ ಲಾಡ್ ಅವರನ್ನು ಮತ್ತೆ ಕಾರ್ಮಿಕ ಸಚಿವರನ್ನಾಗಿ ನೇಮಕ ಮಾಡಿರುವುದು ರಾಜ್ಯದ ಜನರ ದೌರ್ಭಾಗ್ಯ ಎಂದು ಅವರು ಟೀಕಿಸಿದ್ದಾರೆ.

ದುಡ್ಡು ನೀಡಿದವರಿಗೆ ಮಾತ್ರ ಮನೆ ಎಂಬ ರೀತಿಯಲ್ಲಿ ಮನಿ ಇದ್ದರೆ ಮಾತ್ರ ಮನೆ ಎಂಬ ಆರೋಪಕ್ಕೆ ಗುರಿಯಾಗಿದ್ದ ಜಮೀರ್ ಅಹ್ಮದ್ ಖಾನ್ ಅವರಿಗೆ ಮತ್ತೆ ವಸತಿ ಖಾತೆ ನೀಡಿರುವುದನ್ನು ಪ್ರಶ್ನಿಸಿರುವ ಗಡ್ಡಿ, ಇದರಿಂದ ಕಾಂಗ್ರೆಸ್ ಸರ್ಕಾರಕ್ಕೆ ಆತ್ಮಗೌರವವೇ ಇಲ್ಲ ಎಂಬುದು ಸ್ಪಷ್ಟವಾಗುತ್ತದೆ ಎಂದು ಹೇಳಿದ್ದಾರೆ.

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪೂರ್ವಭಾವಿ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳ ಹಿನ್ನೆಲೆಯಲ್ಲಿ ಶಿಕ್ಷಣ ಇಲಾಖೆಯ ಕಾರ್ಯವೈಖರಿ ಕುರಿತು ಟೀಕೆಗಳು ಕೇಳಿಬಂದಿದ್ದರೂ ಎಸ್.ಎಸ್. ಮಧು ಬಂಗಾರಪ್ಪ ಅವರಿಗೆ ಮತ್ತೆ ಶಿಕ್ಷಣ ಖಾತೆ ನೀಡಿರುವುದು ರಾಜ್ಯದ ಸುಶಿಕ್ಷಿತರಿಗೆ ತಲೆತಗ್ಗಿಸುವಂತಾಗಿದೆ ಎಂದು ಆರೋಪಿಸಿದ್ದಾರೆ.

ಕಾಂಗ್ರೆಸ್ ಸರ್ಕಾರದ ಆಡಳಿತ ಹಾಗೂ ಸಚಿವ ಸಂಪುಟದ ಬೆಳವಣಿಗೆಗಳನ್ನು ರಾಜ್ಯದ ಜನರು ಗಮನಿಸುತ್ತಿದ್ದಾರೆ. 2028ರ ವಿಧಾನಸಭಾ ಚುನಾವಣೆಯಲ್ಲಿ ಈ ಸರ್ಕಾರವನ್ನು ಕಿತ್ತೊಗೆಯಲು ಜನರು ಉತ್ಸುಕರಾಗಿದ್ದಾರೆ ಎಂದು ವಿಜಯಕುಮಾರ ಗಡ್ಡಿ ತಿಳಿಸಿದ್ದಾರೆ.

## ದೇಶಪ್ರೇಮದೊಂದಿಗೆ ಸಾಮರಸ್ಯದಿಂದ ಬಾಳೋಣ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸ್ವಾತಂತ್ರ್ಯಕ್ಕಾಗಿ ತ್ಯಾಗ, ಬಲಿದಾನ ಮಾಡಿದ ಹಿರಿಯರನ್ನು ಸ್ಮರಿಸುವ ದಿನವೇ ಆಗಸ್ಟ್ 15. ದೇಶಕ್ಕಾಗಿ ಹೋರಾಡಿದ ಮಹನೀಯರ ದೇಶಪ್ರೇಮವನ್ನು ನೆನೆಯುವುದು ಪ್ರತಿಯೊಬ್ಬ ಭಾರತೀಯನ ಕರ್ತವ್ಯವಾಗಿದ್ದು, ಈ ದಿನ ಭಾರತೀಯರಿಗೆ ಸುದಿನವಾಗಿದೆ ಎಂದು ಗೃಹರಕ್ಷಕ ದಳದ ನರೇಗಲ್ಲ ಘಟಕದ ಅಧಿಕಾರಿ ಸುರೇಶ ಹಳ್ಳಿಕೇರಿ ಹೇಳಿದರು. ನರೇಗಲ್ಲದ ಗೃಹರಕ್ಷಕ ದಳದ ಕಾರ್ಯಾಲಯದಲ್ಲಿ 80ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು. ನಿಡಗುಂದಿ ಅನ್ನದಾನೇಶ್ವರ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಎಂ.ಬಿ. ಕೊಪ್ಪದ ಮಾತನಾಡಿ, ಸೇವೆ ಮಾಡುವ ಅವಕಾಶ ಎಲ್ಲರಿಗೂ ದೊರೆಯುವುದಿಲ್ಲ. ಆದರೆ ವೃತ್ತಿಯ ಕರ್ತವ್ಯದ ಜೊತೆಗೆ ದೇಶಸೇವೆಯನ್ನೂ ಮಾಡುತ್ತಿರುವ ಗೃಹರಕ್ಷಕ ದಳದ ಸಿಬ್ಬಂದಿಯ ಸೇವೆ ಶ್ಲಾಘನೀಯ. ದೇಶದ ಶಾಂತಿ, ಸುರಕ್ಷತೆ ಹಾಗೂ ಸುವ್ಯವಸ್ಥೆ ಕಾಪಾಡುವಲ್ಲಿ ಗೃಹರಕ್ಷಕ ದಳದ ಸೇವೆ ಮಹತ್ವದ್ದಾಗಿದೆ ಎಂದರು.

ಈ ಸಂದರ್ಭದಲ್ಲಿ ಗೃಹರಕ್ಷಕ ದಳದ ಸದಸ್ಯರು ಸಮಾನತೆ, ಸಹೋದರತ್ವ ಹಾಗೂ ಸಾಮರಸ್ಯದೊಂದಿಗೆ ಬಾಳುವುದರ ಜೊತೆಗೆ ದೇಶದ ಪ್ರಗತಿಗಾಗಿ ಒಗ್ಗಟ್ಟಿನಿಂದ ಶ್ರಮಿಸುವುದಾಗಿ ಪ್ರತಿಜ್ಞೆ ಸ್ವೀಕರಿಸಿದರು. ಕಾರ್ಯಕ್ರಮದಲ್ಲಿ ಎಂ.ಬಿ. ಗೋಡಿ, ಪಿ.ಎಸ್. ಸಾಬಳೆ, ಜೆ.ಡಿ. ಬಂಡೀವಡ್ಡರ, ವಿ.ವಿ. ಇಟಗಿ, ಕೆ.ವಿ. ಹಾಳಕೇರಿ, ಎಸ್.ವೈ. ಕುಂಬಾರ, ಎಂ.ಬಿ. ಕಡೆತೋಟದ, ಎಸ್.ವಿ. ಮುಸಿಗೇರಿ, ಬಿ.ಬಿ. ನೆಲ್ಲೂರ, ಎ.ಬಿ. ಕುರುಡಗಿ, ವಿರೂಪಾಕ್ಷ ಇಟಗಿ, ಎಂ.ಕೆ. ಅರಮನಿ, ಎಸ್.ಬಿ. ಸವಡಿ ಸೇರಿದಂತೆ ಹಲವಾರು ಗೃಹರಕ್ಷಕ ದಳದ ಸಿಬ್ಬಂದಿ ಉಪಸ್ಥಿತರಿದ್ದರು.

## ಆ.16ರಂದು ಪಿರಮಿಡ್ ಧ್ಯಾನ ಮಂದಿರ ಉದ್ಘಾಟನೆ

ಲಕ್ಷ್ಮೇಶ್ವರ: ಪಿರಮಿಡ್ ಸ್ಪಿರಿಚ್ಯುವಲ್ ಧ್ಯಾನ ಪರಿವಾರದ ವತಿಯಿಂದ ಪಟ್ಟಣದಲ್ಲಿ ನೂತನವಾಗಿ ನಿರ್ಮಿಸಿರುವ ಪಿರಮಿಡ್ ಧ್ಯಾನ ಮಂದಿರದ ಉದ್ಘಾಟನಾ ಕಾರ್ಯಕ್ರಮ ಆ.16ರಂದು ಬೆಳಿಗ್ಗೆ 10.30ಕ್ಕೆ ವಿಠೋಬ ದೇವರ ದೇವಸ್ಥಾನದ ಹಿಂದಿರುವ ಶ್ರೀ ಚಂದ್ರಣ್ಣ ಓದುನವರ ಅವರ ಮನೆಯಲ್ಲಿ ನಡೆಯಲಿದೆ. ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಅವರು ಧ್ಯಾನ ಮಂದಿರವನ್ನು ಉದ್ಘಾಟಿಸಲಿದ್ದು, ಬ್ರಹ್ಮಕುಮಾರಿ ನಾಗಲಾಂಬಿಕಾ ಅಕ್ಕನವರು ಉಪಸ್ಥಿತರಿರುವರು.

ಡಾ. ಜೀವಂಧರ ಕೇತಪ್ಪನವರ ಸತ್ಸಂಗ ನಡೆಸಿಕೊಡಲಿದ್ದಾರೆ. ವಿದ್ಯಾರಾಣಿ, ನೇತ್ರಾವತಿ, ಎಮ್ಮೆಟ್ಟಿ ಹಿರೇಮಠ ಹಾಗೂ ಜಿ. ಶಿವಾನಂದ ಸೇರಿದಂತೆ ಪಿರಮಿಡ್ ಮಾಸ್ಟರ್‌ಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ವಿನಾಯಕ ಹೆಗಡೆ ಹಾಗೂ ಗೀತಾ ಹೆಗಡೆ ಅವರಿಂದ ರುದ್ರಪಠಣ ನಡೆಯಲಿದೆ.

ಬೆಳಿಗ್ಗೆ 10.30ರಿಂದ ಮಧ್ಯಾಹ್ನ 12ರವರೆಗೆ ಧ್ಯಾನ, ಸತ್ಸಂಗ ಹಾಗೂ ಧ್ಯಾನಾರ್ಥಿಗಳ ಅನುಭವ ಹಂಚಿಕೆ ನಡೆಯಲಿದ್ದು, ಬಳಿಕ ಮಹಾಪ್ರಸಾದ ವಿತರಣೆ ನಡೆಯಲಿದೆ ಎಂದು ಆಯೋಜಕರು ತಿಳಿಸಿದ್ದಾರೆ.

## ಸಂಕ್ಷಿಪ್ತ ಸುದ್ದಿಗಳು

# ಮಹಿಳಾ ಕಾಲೇಜಿನಲ್ಲಿ ಸ್ವಾತಂತ್ರ್ಯೋತ್ಸವದ ಸಂಭ್ರಮ




**ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ನಗರದ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಶನಿವಾರ 80ನೇ ಸ್ವಾತಂತ್ರ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು. ಕಾಲೇಜಿನ ಪ್ರಾಚಾರ್ಯ ಡಾ. ಗಣಪತಿ ಲಮಾಣಿ ರಾಷ್ಟ್ರಧ್ವಜಾರೋಹಣ ನೆರವೇರಿಸಿದರು. ನಮ್ಮದು ಪುರುಷ ಪ್ರಧಾನ ಸಮಾಜವಾಗಿದ್ದರೂ, ಇಂದು ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲೂ ಪುರುಷರಿಗೆ ಸಮಾನವಾಗಿ ಸಾಧನೆ ಮಾಡುತ್ತಿರುವುದು ಸಂತಸದ ಸಂಗತಿಯಾಗಿದೆ. ಸ್ವಾತಂತ್ರ್ಯ ಹಾಗೂ ಸಮಾನತೆಗಾಗಿ ಹೋರಾಡಿದ ಮಹನೀಯರ ಶ್ರಮ ಮತ್ತು ತ್ಯಾಗವನ್ನು ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯವಾಗಬೇಕು ಎಂದು ಡಾ. ಗಣಪತಿ ಲಮಾಣಿ ಕರೆ ನೀಡಿದರು. ಕಾರ್ಯಕ್ರಮದಲ್ಲಿ ಗಂಗಾವತಿಯ ಎಸ್‌ಕೆಎನ್‌ಜಿ ಕಾಲೇಜಿನ ಪತ್ರಿಕೋದ್ಯಮ ವಿಭಾಗದ ಸಹಾಯಕ ಪ್ರಾಧ್ಯಾಪಕ ಹಾಗೂ ಮುಖ್ಯಸ್ಥ ಡಾ. ನರಸಿಂಹ ಅತಿಥಿಯಾಗಿ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕಿ ರಾಜಮಾ, ವಾಣಿಜ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ವಿಠೋಬಾ, ಇತಿಹಾಸ ವಿಭಾಗದ ಮುಖ್ಯಸ್ಥೆ ಶುಭ, ಇಂಗ್ಲಿಷ್ ವಿಭಾಗದ ಮುಖ್ಯಸ್ಥೆ ಸುಮಯ್ಯ, ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಲಲಿತಾ, ಕಾಲೇಜಿನ ಅಧೀಕ್ಷಕ ಅಲ್ಲಾಭಕ್ಷಿ, ಗ್ರಂಥಪಾಲಕ ಮಲ್ಲಿಕಾರ್ಜುನ, ಹನುಮಪ್ಪ, ವಿವಿಧ ವಿಭಾಗಗಳ ಅತಿಥಿ ಉಪನ್ಯಾಸಕರು, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಬಿಜೆಪಿ ಕಚೇರಿಯಲ್ಲಿ 80ನೇ ಸ್ವಾತಂತ್ರ್ಯೋತ್ಸವ ಧ್ವಜಾರೋಹಣ

**ವಿಜಯಸಾಕ್ಷಿ ಸುದ್ದಿ, ಗದಗ**

ಭಾರತದ 80ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಗದಗ ನಗರದ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮ ಆಯೋಜಿಸಲಾಗಿತ್ತು. ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ರಾಷ್ಟ್ರಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಭಾರತದ ಸ್ವಾತಂತ್ರ್ಯಕ್ಕಾಗಿ ಅನೇಕ ಮಹನೀಯರು ತಮ್ಮ ಜೀವನವನ್ನೇ ತ್ಯಾಗ ಮಾಡಿ ಬಲಿದಾನಗೈದಿದ್ದಾರೆ. ಅಂತಹ ಮಹನೀಯರ ತ್ಯಾಗ, ಬಲಿದಾನದಿಂದಲೇ ನಮಗೆ ಸ್ವಾತಂತ್ರ್ಯ ದೊರೆತಿದೆ. ಇಂದು ಭಾರತ ವಿಶ್ವದ ನಾಲ್ಕನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿದ್ದು, 80ನೇ ಸ್ವಾತಂತ್ರ್ಯೋತ್ಸವವನ್ನು ಸಂಭ್ರಮದಿಂದ ಆಚರಿಸುತ್ತಿದೆ ಎಂದು ಬಸವರಾಜ ಬೊಮ್ಮಾಯಿ ಹೇಳಿದರು. ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ, ಮುಖಂಡರಾದ ಎಂ.ಎಸ್. ಕರೀಗೌಡ್ರ, ಲಿಂಗರಾಜ ಪಾಟೀಲ, ಸುರೇಶ ಮರಳಪ್ಪನವರ, ಅಶೋಕ ನವಲಗುಂದ, ಜಗನ್ನಾಥಸಾ ಭಾಂಡಗೆ, ಬಿ.ಎಚ್. ಲದ್ವಾ, ಎಂ.ಎಂ. ಹಿರೇಮಠ, ಸಿದ್ದು ಪಲ್ಲೇದ, ವಿಜಯಕುಮಾರ ಗಡ್ಡಿ, ರವಿ ದಂಡಿನ, ಸುಧೀರ ಕಾಟಿಗರ, ಶಂಕರ ಕಾಕಿ, ಸಂತೋಷ ಅಕ್ಕಿ, ನಿಂಗಪ್ಪ ಹುಗ್ಗಿ, ಸುಭಾಸ ಸುಂಕದ, ಮಂಜುನಾಥ ಹಳ್ಳೂರಮಠ, ಕೆ.ಪಿ. ಕೋಟಿಗೌಡ್ರ, ಅನೀಲ ಅಬ್ಬಿಗೇರಿ, ಶಿವು ಹಿರೇಮನಿಪಾಟೀಲ, ಪ್ರಶಾಂತ ನಾಯ್ಕರ, ದೇವಪ್ಪ ಗೊಟೂರ, ಅಮರನಾಥ ಬೆಟಗೇರಿ, ರಮೇಶ ಸಜ್ಜಗಾರ, ಮಾದವ ಗಣಾಚಾರಿ, ಕಿರಣ ಭೂಮಾ, ಜಯಶ್ರೀ ಉಗಲಾಟದ, ನಿರ್ಮಲಾ ಕೊಳ್ಳಿ, ಸ್ವಾತಿ ಅಕ್ಕಿ, ವಂದನಾ ವರ್ಣೇಕರ, ಶಾರದಾ ಸಜ್ಜನರ, ಅಶ್ವಿನಿ ಜಗತಾಪ್, ಪದ್ಮನಿ ಮುತ್ತಲದಿನ್ನಿ, ಮೇಘಾ ಕೊಟ್ಟೂರ, ಪ್ರೀತಿ ಶಿವಪ್ಪನಮಠ, ರವಿ ಮಾನ್ವಿ, ಅಕ್ಕಮ್ಮ ವಸ್ತದ, ವಿನೋದ ಹಂಸನೂರ, ಮಂಜುನಾಥ ಪಟ್ಟಣಶೆಟ್ಟಿ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

# ಸಮೃದ್ಧ ರಾಷ್ಟ್ರ ನಿರ್ಮಾಣಕ್ಕೆ ಸಂಕಲ್ಪ ಮಾಡೋಣ: ತಹಸೀಲ್ದಾರ್ ರಾಘವೇಂದ್ರ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಜಾತಿ, ಧರ್ಮ, ಭಾಷೆಗಳನ್ನು ಮೀರಿ ಸುಖ, ಶಾಂತಿ ಹಾಗೂ ಸಮೃದ್ಧ ರಾಷ್ಟ್ರ ನಿರ್ಮಾಣಕ್ಕಾಗಿ ನಾವೆಲ್ಲರೂ ಸಂಕಲ್ಪ ಮಾಡೋಣ ಎಂದು ತಹಸೀಲ್ದಾರ್ ಕೆ. ರಾಘವೇಂದ್ರ ರಾವು ಕರೆ ನೀಡಿದರು. ಶನಿವಾರ ಶಿರಹಟ್ಟಿಯ ಎಸ್.ಎಂ. ಡಬಾಲಿ ತಾಲೂಕು ಕ್ರೀಡಾಂಗಣದಲ್ಲಿ ತಾಲೂಕು ಆಡಳಿತದ ವತಿಯಿಂದ ಆಯೋಜಿಸಿದ್ದ 80ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಗೌರವ ಧ್ವಜವಂದನೆ ಸ್ವೀಕರಿಸಿ ಅವರು ಮಾತನಾಡಿದರು. ರಾಷ್ಟ್ರದ ಸರ್ವತೋಮುಖ ಪ್ರಗತಿಗೆ ಯುವಶಕ್ತಿ ಹಾಗೂ ವಿದ್ಯಾರ್ಥಿಗಳು ದೇಶಭಕ್ತಿ, ನಿಷ್ಠೆ, ಶಿಸ್ತು, ಪ್ರಜ್ಞೆ, ವಿಶ್ವಾಸ ಮತ್ತು ಸ್ವಾವಲಂಬನೆಯಂತಹ ಗುಣಗಳನ್ನು ಬೆಳೆಸಿಕೊಳ್ಳಬೇಕು. ಸಹಸ್ರಾರು ವರ್ಷಗಳ ಗುಲಾಮಗಿರಿಯಿಂದ ಹೊರಬಂದು, ಲಕ್ಷಾಂತರ ಜನರ ತ್ಯಾಗ ಮತ್ತು ಬಲಿದಾನದಿಂದ ದೊರೆತ ಸ್ವಾತಂತ್ರ್ಯವನ್ನು ರಕ್ಷಿಸಿ, ಮತ್ತಷ್ಟು ಬಲಪಡಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದರು.

ಆ.15ರ ಸ್ವಾತಂತ್ರ್ಯ ದಿನ ಪ್ರತಿಯೊಬ್ಬ ಭಾರತೀಯನಿಗೂ ಹೆಮ್ಮೆಯ ಹಾಗೂ ಸಂಭ್ರಮದ ದಿನವಾಗಿದೆ. ಬ್ರಿಟಿಷರ ಆಳ್ವಿಕೆಯಿಂದ ದೇಶವನ್ನು ಮುಕ್ತಗೊಳಿಸಲು ಹೋರಾಡಿದ ಸ್ವಾತಂತ್ರ್ಯ ಹೋರಾಟಗಾರರು ಹಾಗೂ ದೇಶಕ್ಕಾಗಿ ಜೀವನವನ್ನೇ ಮುಡಿಪಾಗಿಟ್ಟ ಮಹನೀಯರನ್ನು ಸ್ಮರಿಸುವ ಸುದಿನ ಇದಾಗಿದೆ. ಅನೇಕರು ಕುಟುಂಬ, ಆಸ್ತಿ, ಸುಖ-ಸಂತೋಷಗಳನ್ನು ತ್ಯಜಿಸಿ ಹೋರಾಟ ನಡೆಸಿದರೆ, ಕೆಲವರು ಸೆರೆವಾಸ ಅನುಭವಿಸಿದರು. ಇನ್ನು ಕೆಲವರು ದೇಶದ ಸ್ವಾತಂತ್ರ್ಯಕ್ಕಾಗಿ ಪ್ರಾಣವನ್ನೇ ಅರ್ಪಿಸಿದರು. ಅವರ ತ್ಯಾಗ, ಬಲಿದಾನ ಮತ್ತು ದೇಶಪ್ರೇಮದ ಫಲವಾಗಿ ಇಂದು ನಾವು ಸ್ವತಂತ್ರ ರಾಷ್ಟ್ರದಲ್ಲಿ ನೆಮ್ಮದಿಯಿಂದ ಬದುಕುತ್ತಿದ್ದೇವೆ ಎಂದು ಹೇಳಿದರು.

ಸ್ವಾತಂತ್ರ್ಯ ದಿನಾಚರಣೆ ಕೇವಲ ಧ್ವಜಾರೋಹಣ ಹಾಗೂ ಸಿಹಿ ವಿತರಿಸುವ ಕಾರ್ಯಕ್ರಮಕ್ಕೆ ಸೀಮಿತವಾಗಬಾರದು. ಸ್ವಾತಂತ್ರ್ಯ ಹೋರಾಟಗಾರರ ತ್ಯಾಗದ ಮಹತ್ವವನ್ನು ಯುವಜನರಿಗೆ ತಿಳಿಸುವುದು, ದೇಶದ ಏಕತೆ, ಅಖಂಡತೆ ಹಾಗೂ ಸಾರ್ವಭೌಮತ್ವವನ್ನು ಕಾಪಾಡುವ ಸಂಕಲ್ಪ ಮಾಡುವುದು ಈ ದಿನದ ನಿಜವಾದ ಆಶಯವಾಗಬೇಕು. ಜಾತಿ, ಧರ್ಮ, ಭಾಷೆ ಹಾಗೂ ಪ್ರಾದೇಶಿಕ ಭೇದಗಳನ್ನು ಬದಿಗೊತ್ತಿ ದೇಶದ ಹಿತವೇ ಮುಖ್ಯ ಎಂಬ ಭಾವನೆಯೊಂದಿಗೆ ಪ್ರತಿಯೊಬ್ಬರೂ ಮುನ್ನಡೆಯಬೇಕು.

ಮಹನೀಯರು ಕಂಡ ಕನಸಿನ ಭಾರತ ನಿರ್ಮಿಸುವ ಜವಾಬ್ದಾರಿ ಇಂದಿನ ಪೀಳಿಗೆಯ ಮೇಲಿದೆ ಎಂದರು. ನಂತರ ಶಾಲಾ ವಿದ್ಯಾರ್ಥಿಗಳಿಂದ ದೇಶಭಕ್ತಿ ಸಾರುವ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಶಾಸಕ ಚಂದ್ರು ಲಮಾಣಿ ಅಧ್ಯಕ್ಷತೆ ವಹಿಸಿದ್ದರು. ಸಿಪಿಐ ಬಿ.ವ್ಹಿ. ನ್ಯಾಮಗೌಡ, ಬಿಇಒ ಶಿವರಾಜ ಸಿಮಿಕೇರಿ, ತಾಪಂ ಇಒ ರಾಮಣ್ಣ ದೊಡ್ಡಮನಿ, ಪಪಂ ಮುಖ್ಯಾಧಿಕಾರಿ ಎನ್.ಎಂ. ಹಾದಿಮನಿ, ವಿ.ಎ. ಮುಳಗುಂದಮಠ, ಬಸವರಾಜ ಕಾತರಾಳ, ಸಂತೋಷ ಅಸ್ಕಿ, ಎಚ್.ಜೆ. ಬಾವಿಕಟ್ಟಿ, ವೀರಯ್ಯ ಮಠಪತಿ, ಗಿರಿಜಾ ಪೂಜಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ರಫ್ತು ಆಧಾರಿತ ಅಗ್ರಿಟೆಕ್ ಹಬ್ ಮಾಡೋಣ: ಉದ್ಯಮಿ ಸಂಜಯ್ ಆಲಮೇಲಕರ್

# ಗದಗಕ್ಕೆ ಲೋಕಲ್ ಟು ಗ್ಲೋಬಲ್ ಟಚ್

**ವಿಜಯಸಾಕ್ಷಿ ಸುದ್ದಿ, ಗದಗ**




> ಗದಗದ ಸಾಮರ್ಥ್ಯವನ್ನು ಸ್ಥಳೀಯ ಮಾರುಕಟ್ಟೆಗೆ ಸೀಮಿತಗೊಳಿಸಬಾರದು. ಲೋಕಲ್ ಟು ಗ್ಲೋಬಲ್ ಪರಿಕಲ್ಪನೆಯೊಂದಿಗೆ ಜಿಲ್ಲೆಯ ಉತ್ಪನ್ನಗಳಿಗೆ ಜಾಗತಿಕ ಮಾರುಕಟ್ಟೆ ಸೃಷ್ಟಿಸಬೇಕು.
> **- ಸಂಜಯ್ ಆಲಮೇಲಕರ್,** ಹಿರಿಯ ಉದ್ಯಮಿ ಹಾಗೂ ಜೆಎಸ್‌ಡಬ್ಲ್ಯು ಸ್ಟೀಲ್ ಉಪಾಧ್ಯಕ್ಷ

ಗದಗದ ನಿಜವಾದ ಸಂಪತ್ತು ಇಲ್ಲಿನ ಜನರು. ಉದ್ಯಮಶೀಲತೆ, ಕೃಷಿ, ಕೌಶಲ್ಯ ಹಾಗೂ ಸಂಪನ್ಮೂಲಗಳಿರುವ ಗದಗ ಜಿಲ್ಲೆಯನ್ನು ಸ್ಥಳೀಯ ಮಾರುಕಟ್ಟೆಗೆ ಸೀಮಿತಗೊಳಿಸದೆ ರಫ್ತು ಆಧಾರಿತ ಅಗ್ರಿಟೆಕ್ ಹಬ್ ಆಗಿ ರೂಪಿಸಿ ಜಾಗತಿಕ ಮಾರುಕಟ್ಟೆಗೆ ಕೊಂಡೊಯ್ಯುವ ಸಂಕಲ್ಪ ಮಾಡಬೇಕು ಎಂದು ವಿಜಯನಗರದ ಜೆಎಸ್‌ಡಬ್ಲ್ಯು ಸ್ಟೀಲ್‌ನ ಉಪಾಧ್ಯಕ್ಷ ಹಾಗೂ ಹಿರಿಯ ಉದ್ಯಮಿ ಸಂಜಯ್ ಆಲಮೇಲಕರ್ ಕರೆ ನೀಡಿದರು.

ನಗರದ ಎಪಿಎಂಸಿ ಯಾರ್ಡ್‌ನ ಸ್ವಾಮಿ ವಿವೇಕಾನಂದ ಹಾಗೂ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ ಹಾಗೂ ಜಿಲ್ಲಾ ಪಂಚಾಯಿತಿ ಆಶ್ರಯದಲ್ಲಿ ಆ.14ರಿಂದ 18ರವರೆಗೆ ನಡೆಯುತ್ತಿರುವ ಗದಗ ಉತ್ಸವ-2026 ಕೈಗಾರಿಕಾ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಗದಗದ ಸಾಮರ್ಥ್ಯವನ್ನು ಸ್ಥಳೀಯ ಮಾರುಕಟ್ಟೆಗೆ ಸೀಮಿತಗೊಳಿಸಬಾರದು. ಲೋಕಲ್ ಟು ಗ್ಲೋಬಲ್ ಪರಿಕಲ್ಪನೆಯೊಂದಿಗೆ ಜಿಲ್ಲೆಯ ಉತ್ಪನ್ನಗಳಿಗೆ ಜಾಗತಿಕ ಮಾರುಕಟ್ಟೆ ಸೃಷ್ಟಿಸಬೇಕು. ಎಂದರು.

ಗುಜರಾತ್, ಆಂಧ್ರಪ್ರದೇಶ ಸೇರಿದಂತೆ ಹೊರರಾಜ್ಯಗಳ ಹೂಡಿಕೆದಾರರನ್ನು ಗದಗಕ್ಕೆ ಕರೆತಂದು ಅಗತ್ಯ ಕಚ್ಚಾ ವಸ್ತು, ತಂತ್ರಜ್ಞಾನ ಹಾಗೂ ಸಹಕಾರ ಒದಗಿಸಲು ಸಿದ್ಧವಿರುವುದಾಗಿ ಆಲಮೇಲಕರ್ ತಿಳಿಸಿದರು.

ಜೆಎಸ್‌ಡಬ್ಲ್ಯು ವತಿಯಿಂದ ಸ್ಥಳೀಯ ಉದ್ಯಮಿಗಳಿಗೆ ತಾಂತ್ರಿಕ, ಮೆಟೀರಿಯಲ್ ಹಾಗೂ ಮಾರುಕಟ್ಟೆ ನೆರವು ನೀಡುವ ಸಾಧ್ಯತೆಗಳನ್ನೂ ಅವರು ಪ್ರಸ್ತಾಪಿಸಿದರು.

ದೇಶದ ಜಿಡಿಪಿಗೆ ಶೇ.30 ಹಾಗೂ ರಫ್ತಿಗೆ ಶೇ.45ರಷ್ಟು ಕೊಡುಗೆ ನೀಡುತ್ತಿರುವುದು ಎಂಎಸ್‌ಎಂಇ ವಲಯ. ಕರ್ನಾಟಕದಲ್ಲಿ 26 ಲಕ್ಷಕ್ಕೂ ಅಧಿಕ ಎಂಎಸ್‌ಎಂಇಗಳಿದ್ದು, ಸ್ಥಳೀಯವಾಗಿ ನೋಂದಣಿಯಾಗುವ ಎಂಎಸ್‌ಎಂಇಗಳಿಗೆ ಕಂಪನಿ ವತಿಯಿಂದ ₹45 ಲಕ್ಷದವರೆಗೆ ಆರ್ಥಿಕ ಪ್ರೋತ್ಸಾಹ ನೀಡುವ ಯೋಜನೆ ಜಾರಿಯಲ್ಲಿದೆ ಎಂದರು.

ಒಂದು ಕಾಲದಲ್ಲಿ ಹತ್ತಿ ಉತ್ಪಾದನೆಯಲ್ಲಿ ಮುಂಚೂಣಿಯಲ್ಲಿದ್ದ ಗದಗದಲ್ಲಿ ಹತ್ತಿ ಉದ್ಯಮವನ್ನು ಪುನರುಜ್ಜೀವನಗೊಳಿಸುವ ಅಗತ್ಯವಿದೆ. ರೈಲ್ವೆ ಬೋಗಿಗಳ ಬಿಡಿಭಾಗಗಳನ್ನು ಪಶ್ಚಿಮ ಬಂಗಾಳದಿಂದ ತರಿಸುವ ಬದಲು ಗದಗದಲ್ಲೇ ಉತ್ಪಾದಿಸಲು ಅಪಾರ ಅವಕಾಶವಿದೆ. ಈ ಕುರಿತು ನೈಋತ್ಯ ರೈಲ್ವೆ ಮಹಾಪ್ರಬಂಧಕರೊಂದಿಗೆ ಚರ್ಚೆ ನಡೆಸಲಾಗಿದೆ ಎಂದು ಹೇಳಿದರು.

ಆಲಮೇಲಕರ್ ಸೂಚಿಸಿದ ಪಂಚಸೂತ್ರಗಳಲ್ಲಿ ಅಗ್ರಿಟೆಕ್ ಹಬ್, ಸೀಡ್ ಇನ್ನೋವೇಶನ್ ಸೆಂಟರ್, ಫುಡ್ ಪ್ರೊಸೆಸಿಂಗ್ ಡೆಸ್ಟಿನೇಷನ್, ಸ್ಟೀಲ್-ಇಂಜಿನಿಯರಿಂಗ್ ಕ್ಲಸ್ಟರ್ ಹಾಗೂ ರಫ್ತು ಆಧಾರಿತ ಜಿಲ್ಲೆ ಪ್ರಮುಖವಾಗಿವೆ.

ಯುವಕರು ಉದ್ಯೋಗ ಬೇಡುವವರಾಗದೆ ಉದ್ಯೋಗ ನೀಡುವವರಾಗಬೇಕು. ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಕಲಿಕೆಗೆ ಒತ್ತು ನೀಡಿ, ಉತ್ಸವದ ಎಲ್ಲ ಮಳಿಗೆಗಳಿಗೆ ಅವರನ್ನು ಕರೆತರಬೇಕು. ಗದಗದಲ್ಲಿ ಸ್ಟಾರ್ಟಅಪ್ ಫೆಸಿಲಿಟೇಶನ್ ಸೆಂಟರ್, ಎಂಎಸ್‌ಎಂಇ ತರಬೇತಿ ಹಾಗೂ ಕೌಶಲ್ಯಾಭಿವೃದ್ಧಿ ಕೇಂದ್ರ ಸ್ಥಾಪನೆಯಾಗಬೇಕು. ಉದ್ಯಮ-ಶಿಕ್ಷಣ ಸಂಸ್ಥೆಗಳ ನಡುವೆ ಕೊಂಡಿ ಬೆಸೆಯಲು ಹಾಗೂ ಉತ್ತರ ಕರ್ನಾಟಕಕ್ಕೆ ಸಿಎಸ್‌ಆರ್ ನಿಧಿ ತರಲು ಪ್ರಯತ್ನಿಸುವುದಾಗಿ ಅವರು ಭರವಸೆ ನೀಡಿದರು.

ಮೈಂಡ್‌ಸೆಟ್ ಕೋಚ್ ಹಾಗೂ ಕಾರ್ಪೊರೇಟ್ ಟ್ರೇನರ್ ಮಹೇಶ ಮಾಶ್ಯಾಳ ಮಾತನಾಡಿ, 2030-32ರ ವೇಳೆಗೆ ತಂತ್ರಜ್ಞಾನದಿಂದ ಜಗತ್ತಿನಲ್ಲಿ ದೊಡ್ಡ ಬದಲಾವಣೆಯಾಗಲಿದೆ. ಎಐ ಸೇರಿದಂತೆ ಹೊಸ ತಂತ್ರಜ್ಞಾನಕ್ಕೆ ಹೊಂದಿಕೊಳ್ಳದ ಉದ್ಯಮಗಳು ಸಂಕಷ್ಟಕ್ಕೆ ಸಿಲುಕಲಿವೆ ಎಂದು ಎಚ್ಚರಿಸಿದರು. ಆನ್‌ಲೈನ್ ಮಾರುಕಟ್ಟೆ ವೇಗವಾಗಿ ಬೆಳೆಯುತ್ತಿದ್ದು, ಗ್ರಾಹಕರ ಮನಸ್ಥಿತಿಯೂ ಬದಲಾಗಿದೆ ಎಂದರು.

ಜ.ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಮಾತನಾಡಿ, ಗ್ರಾಮೀಣ ಪ್ರದೇಶಗಳಿಂದ ಯುವಕರ ವಲಸೆ ತಡೆಯಲು ಅಲ್ಲಿಯೇ ಉದ್ಯೋಗ ಸೃಷ್ಟಿಸಬೇಕು. ಕೈಗಾರಿಕೆಗಳ ವಿಕೇಂದ್ರೀಕರಣದಿಂದ ಮಾತ್ರ ಹಳ್ಳಿಗಳ ಅಭಿವೃದ್ಧಿ ಸಾಧ್ಯ ಎಂದರು.

ಆಶೀರ್ವಾದ್ ಬ್ಯಾಂಕ್ ಅಧ್ಯಕ್ಷ ಸರ್ಫರಾಜ ಉಮಚಗಿ, ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿದರು. ಉತ್ಸವ ಸಮಿತಿ ಅಧ್ಯಕ್ಷ ಮಧುಸೂಧನ ಪುಣೇಕರ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ಚೇಂಬರ್ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಅಧ್ಯಕ್ಷತೆ ವಹಿಸಿದ್ದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಬಬರ್ಚಿ, ಚೇಂಬರ್ ಪದಾಧಿಕಾರಿಗಳು ಹಾಗೂ ಮಹಿಳಾ ಘಟಕದ ಪದಾಧಿಕಾರಿಗಳು ಉಪಸ್ಥಿತರಿದ್ದರು. ಕ್ಷಿತಿ ಅಶ್ವಥ್ ಸುಲಾಖೆ ಪ್ರಾರ್ಥಿಸಿದರು. ಶಿವಬಸಯ್ಯ ಗಡ್ಡದಮಠ ಸಂಗಡಿಗರಿಂದ ಸಂಗೀತ ಕಾರ್ಯಕ್ರಮ ನಡೆಯಿತು. ಚಂದ್ರು ಬಾಳಿಹಳ್ಳಿಮಠ ಹಾಗೂ ಮುರುಗೇಶ ಬಡ್ನಿ ನಿರೂಪಿಸಿದರು. ಚೇಂಬರ್ ಕಾರ್ಯದರ್ಶಿ ಚನ್ನವೀರಪ್ಪ ಹುಣಶಿಕಟ್ಟಿ ವಂದಿಸಿದರು.

# ನರೇಗಲ್ಲ ಪ. ಪಂ.ನಲ್ಲಿ ಸಂಭ್ರಮದ ಸ್ವಾತಂತ್ರ್ಯೋತ್ಸವ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣ ಪಂಚಾಯಿತಿ ಕಾರ್ಯಾಲಯದಲ್ಲಿ 80ನೇ ಸ್ವಾತಂತ್ರ್ಯೋತ್ಸವವನ್ನು ಶನಿವಾರ ಸಂಭ್ರಮ ಹಾಗೂ ದೇಶಭಕ್ತಿ ಭಾವನೆಯೊಂದಿಗೆ ಆಚರಿಸಲಾಯಿತು. ಪಟ್ಟಣ ಪಂಚಾಯಿತಿ ಕಾರ್ಯಾಲಯದಲ್ಲಿ ಮುಖ್ಯಾಧಿಕಾರಿ ಮಲ್ಲೇಶ ಪಚ್ಚಿ ಧ್ವಜಾರೋಹಣ ನೆರವೇರಿಸಿದರು. ಇದೇ ವೇಳೆ ಗ್ರಂಥಾಲಯದಲ್ಲಿ ಪಟ್ಟಣ ಪಂಚಾಯಿತಿಯ ಕಿರಿಯ ಅಭಿಯಂತರ ಜಡೆಪ್ಪ ನಾಡಿಗರ ಧ್ವಜಾರೋಹಣ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಅಧಿಕಾರಿಗಳು, ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರ ತ್ಯಾಗ, ಬಲಿದಾನವನ್ನು ಸ್ಮರಿಸಿ, ದೇಶದ ಪ್ರಗತಿಗೆ ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು.

ವಿದ್ಯಾರ್ಥಿಗಳು ಶಿಸ್ತು, ಸಂಯಮ ಹಾಗೂ ಶಾಂತಿಯಿಂದ ರಾಷ್ಟ್ರೀಯ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ದೇಶದ ಜವಾಬ್ದಾರಿಯುತ ನಾಗರಿಕರಾಗಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯಿತಿ ಸಿಬ್ಬಂದಿಗಳಾದ ಎಂ.ಎಚ್. ಸೀತಿಮನಿ, ರಮೇಶ ಹಲಗಿ, ಶಂಕ್ರಪ್ಪ ದೊಡ್ಡಣ್ಣವರ, ಮಂಜುನಾಥ ಕೊಂಡಗುರಿ, ನೀಲಪ್ಪ ಚಳ್ಳಮರದ, ರಕ್ಷಿತ ಎಲ್., ಆರೀಫಬೇಗ ಮಿರ್ಜಾ, ನಾಜೀಮಾ ಬೇಲೆರಿ, ಎ.ಎಸ್. ಮೆಣಸಗಿ, ನೀರು ಸರಬರಾಜು ಸಿಬ್ಬಂದಿ ಹಾಗೂ ಪೌರ ಕಾರ್ಮಿಕರು ಸೇರಿದಂತೆ ಹಲವರು ಉಪಸ್ಥಿತರಿದ್ದರು. ಇದೇ ವೇಳೆ ಉಪ ತಹಶೀಲ್ದಾರ್ ನಾಡ ಕಚೇರಿ, ಗ್ರಂಥಾಲಯ ಸೇರಿದಂತೆ ವಿವಿಧ ಸರ್ಕಾರಿ ಕಚೇರಿಗಳಲ್ಲಿಯೂ 80ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಧ್ವಜಾರೋಹಣ ನೆರವೇರಿಸಲಾಯಿತು. ಅಂಗನವಾಡಿ ಕಾರ್ಯಕರ್ತರು, ಮಕ್ಕಳು, ಶಾಲೆಗಳ ಎಸ್‌ಡಿಎಂಸಿ ಅಧ್ಯಕ್ಷರು ಹಾಗೂ ಸದಸ್ಯರು, ಶಿಕ್ಷಕರು, ಪೊಲೀಸ್ ಸಿಬ್ಬಂದಿ ಮತ್ತು ಪಟ್ಟಣದ ಗ್ರಾಮಸ್ಥರು ಭಾಗವಹಿಸಿದ್ದರು.

# ಲಕ್ಷ್ಮೇಶ್ವರದಲ್ಲಿ ಸಂಭ್ರಮದ ಸ್ವಾತಂತ್ರ್ಯೋತ್ಸವ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ 80ನೇ ಸ್ವಾತಂತ್ರ್ಯೋತ್ಸವವನ್ನು ಶನಿವಾರ ಸಂಭ್ರಮ, ಸಡಗರ ಹಾಗೂ ದೇಶಭಕ್ತಿ ಭಾವನೆಯೊಂದಿಗೆ ಆಚರಿಸಲಾಯಿತು. ಪಟ್ಟಣ ಸೇರಿದಂತೆ ತಾಲೂಕಿನಾದ್ಯಂತ ವಿವಿಧ ಸರ್ಕಾರಿ ಕಚೇರಿಗಳು, ಶಾಲಾ-ಕಾಲೇಜುಗಳು ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಧ್ವಜಾರೋಹಣ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಪಟ್ಟಣದ ಕಿತ್ತೂರು ಚನ್ನಮ್ಮ ವೃತ್ತದಲ್ಲಿ ಪಂಚಮಸಾಲಿ ಸಮಾಜದ ಅಧ್ಯಕ್ಷ ಮಂಜುನಾಥ ಮಾಗಡಿ ಧ್ವಜಾರೋಹಣ ನೆರವೇರಿಸಿದರು. ಈ ಸಂದರ್ಭದಲ್ಲಿ ಡಾ. ಪ್ರಕಾಶ ಹೊಸಮನಿ, ದೇವಣ್ಣ ಬಳಿಗಾರ, ಮಾದೇವಪ್ಪ ಅಣ್ಣಿಗೇರಿ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

ತಾಲೂಕು ಪಂಚಾಯಿತಿ ಕಚೇರಿಯಲ್ಲಿ ಆಡಳಿತಾಧಿಕಾರಿ ಹಾಗೂ ಇಒ ಮಂಜುಳಾ ಹಕಾರಿ ಧ್ವಜಾರೋಹಣ ನೆರವೇರಿಸಿದರು. ಗ್ಯಾರಂಟಿ ಸಮಿತಿ ತಾಲೂಕು ಅಧ್ಯಕ್ಷ ನಾಗರಾಜ ಮಡಿವಾಳರ, ಕೃಷ್ಣಪ್ಪ ಧರ್ಮರ ಸೇರಿದಂತೆ ಸಿಬ್ಬಂದಿ ಭಾಗವಹಿಸಿದ್ದರು. ನ್ಯಾಯಾಲಯದ ಆವರಣದಲ್ಲಿ ಹಿರಿಯ ದಿವಾಣಿ ನ್ಯಾಯಾಧೀಶ ಭರತಯೋಗೀಶ ಕರಗುದರಿ ಧ್ವಜಾರೋಹಣ ನೆರವೇರಿಸಿದರು. ನ್ಯಾಯವಾದಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು. ನಗರ ಭೂ-ಮಾಪನ ಕಚೇರಿಯಲ್ಲಿ ಭೂ-ಮಾಪನ ಅಧಿಕಾರಿ ವಿದ್ಯಾ ತಳೇಕರ ಹಾಗೂ ಮಾಜಿ ಸೈನಿಕರ ಸಂಘದ ಅಧ್ಯಕ್ಷ ವಿ.ಎಸ್. ಹಿರೇಮಠ ಧ್ವಜಾರೋಹಣ ನೆರವೇರಿಸಿದರು. ಕಚೇರಿ ಸಿಬ್ಬಂದಿ ಹಾಗೂ ಮಾಜಿ ಸೈನಿಕರು ಭಾಗವಹಿಸಿದ್ದರು.

## ಉದ್ಯೋಗ ಅರಸಿ ಹೋಗುವವರಲ್ಲ, ಉದ್ಯೋಗ ನೀಡುವ ಉದ್ಯಮಿಗಳಾಗಿ: ಆದಪ್ಪಗೌಡ್ರ

# ಗದಗ ಉತ್ಸವ ಉತ್ಪನ್ನ, ಉದ್ಯಮ ಸಾಮರ್ಥ್ಯದ ಕನ್ನಡಿ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಉತ್ಸವ ಕೇವಲ ಕೈಗಾರಿಕಾ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳವಲ್ಲ. ಇದು ಗದಗ, ರಾಜ್ಯ ಹಾಗೂ ಅಂತರ್ ರಾಜ್ಯದ ಉತ್ಪನ್ನಗಳು ಮತ್ತು ಉದ್ಯಮಗಳ ಸಾಮರ್ಥ್ಯವನ್ನು ಜಗತ್ತಿಗೆ ಪರಿಚಯಿಸುವ ಹಾಗೂ ಅವುಗಳಿಗೆ ಮಾರುಕಟ್ಟೆ ಒದಗಿಸುವ ವೇದಿಕೆಯಾಗಿದೆ ಎಂದು ಹುಬ್ಬಳ್ಳಿಯ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆ ಅಧ್ಯಕ್ಷ ಜಿ.ಕೆ. ಆದಪ್ಪಗೌಡ್ರ ಹೇಳಿದರು.

ನಗರದ ಎ.ಪಿ.ಎಂ.ಸಿ. ಯಾರ್ಡ್‌ನ ಸ್ವಾಮಿ ವಿವೇಕಾನಂದ ಸಭಾಭವನ ಹಾಗೂ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಆ.14ರಿಂದ 18ರವರೆಗೆ ನಡೆಯಲಿರುವ ಗದಗ ಉತ್ಸವ-2026 ಕೈಗಾರಿಕಾ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಶುಕ್ರವಾರ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಕೃಷಿ ಹಾಗೂ ಕೃಷಿ ಉತ್ಪನ್ನಗಳ ಪ್ರಮುಖ ಮಾರುಕಟ್ಟೆಯಾಗಿರುವ ಗದಗ ಜಿಲ್ಲೆ ಇದೀಗ ವೇಗವಾಗಿ ಉದ್ಯಮೀಕರಣದತ್ತ ಸಾಗುತ್ತಿದೆ. ಪ್ರಮುಖ ವ್ಯಾಪಾರ ಕೇಂದ್ರವಾಗಿ ಬೆಳೆಯುತ್ತಿರುವ ಜಿಲ್ಲೆಯಲ್ಲಿ ಉದ್ಯೋಗ ಸೃಷ್ಟಿಯೂ ಹೆಚ್ಚಾಗುವ ಎಲ್ಲ ಅವಕಾಶಗಳಿವೆ ಎಂದರು.

ಗದಗ ಜಿಲ್ಲೆಯಲ್ಲಿ ಉಗ್ರಾಣ, ಶೀತಲ ಸರಕು ಸಂಗ್ರಹಣಾ ಘಟಕ, ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ ಹಾಗೂ ರಫ್ತು ಘಟಕಗಳನ್ನು ಸ್ಥಾಪಿಸಲು ಪೂರಕ ವಾತಾವರಣವಿದೆ. ಇಂತಹ ಅವಕಾಶಗಳನ್ನು ಸಮರ್ಪಕವಾಗಿ ಬಳಸಿಕೊಂಡರೆ ಜಿಲ್ಲೆಯ ತಲಾ ಆದಾಯ ಹಾಗೂ ಉದ್ಯೋಗ ಸೃಷ್ಟಿ ಹೆಚ್ಚಲಿದೆ ಎಂದು ಹೇಳಿದರು.

ಯುವಕರು ಉದ್ಯೋಗ ಅರಸಿ ಹೋಗುವವರಾಗದೆ, ಉದ್ಯೋಗ ನೀಡುವ ಉದ್ಯಮಿಗಳಾಗಬೇಕು.

ಸಣ್ಣ, ಅತಿ ಸಣ್ಣ ಹಾಗೂ ಗುಡಿ ಕೈಗಾರಿಕೆಗಳಿಗೆ ಜಿಲ್ಲೆಯಲ್ಲಿ ಅಪಾರ ಅವಕಾಶಗಳಿವೆ ಎಂದು ಕರೆ ನೀಡಿದರು.

ಉದ್ಯಮಿಗಳು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಮಾತನಾಡಿದ ಅವರು, ಭೂಮಿಯ ಹೆಚ್ಚಿನ ಬೆಲೆ ಹಾಗೂ ಹಣಕಾಸಿನ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಲು ಸರ್ಕಾರ ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು ಅಭಿವೃದ್ಧಿಪಡಿಸಿ ಹಂಚಿಕೆ ಮಾಡಬೇಕು. ಜಿಲ್ಲೆಯಲ್ಲಿ ವಿಶೇಷ ಆರ್ಥಿಕ ವಲಯ ಸ್ಥಾಪಿಸಿದರೆ ಆರ್ಥಿಕ ಅಭಿವೃದ್ಧಿಗೆ ಮತ್ತಷ್ಟು ವೇಗ ದೊರೆಯಲಿದೆ ಎಂದು ಒತ್ತಾಯಿಸಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯು ಸರ್ಕಾರದ ಸಹಯೋಗದಲ್ಲಿ ಶಾಶ್ವತ ವಸ್ತು ಪ್ರದರ್ಶನ ಕೇಂದ್ರ ನಿರ್ಮಿಸಲು ಮುಂದಾದರೆ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯಿಂದ ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದರು.

ವರ್ಷದಿಂದ ವರ್ಷಕ್ಕೆ ಗದಗ ಉತ್ಸವದ ವ್ಯಾಪ್ತಿ ಹಾಗೂ ವೈಭವ ಹೆಚ್ಚುತ್ತಿರುವುದು ಶ್ಲಾಘನೀಯ. ಇಂತಹ ಮೇಳಗಳಿಂದ ಸ್ಥಳೀಯ ಕೈಗಾರಿಕೆಗಳು, ಉತ್ಪನ್ನಗಳು ಮತ್ತು ಉದ್ಯಮಿಗಳು ಬೆಳೆಯಲು ಉತ್ತಮ ಅವಕಾಶ ದೊರೆಯುತ್ತದೆ ಎಂದರು.

## ಮಳೆ ಕೊರತೆಯಿಂದ ಗದಗ ಜಿಲ್ಲೆಯಲ್ಲಿ ಬರದ ಛಾಯೆ | ಕೇಂದ್ರದ ನೆರವಿಗೆ ಮನವಿ ಸಲ್ಲಿಸಲು ಸಿದ್ಧತೆ

# ಶೇ.80ರಷ್ಟು ಬೆಳೆ ಹಾನಿ; ₹218 ಕೋಟಿ ನಷ್ಟ



**ವಿಜಯಸಾಕ್ಷಿ ಸುದ್ದಿ, ಗದಗ**

> ಕೇವಲ ರಾಜ್ಯ ಸರ್ಕಾರದಿಂದ ಬರ ಪರಿಸ್ಥಿತಿ ಎದುರಿಸುವುದು ಕಷ್ಟ. ಕೇಂದ್ರ ಸರ್ಕಾರ ವಾಸ್ತವಾಂಶಗಳನ್ನು ಅರಿತು ರಾಜ್ಯಕ್ಕೆ ಅಗತ್ಯ ಆರ್ಥಿಕ ನೆರವು ನೀಡಬೇಕು.
> **- ಬಸವರಾಜ ರಾಯರಡ್ಡಿ, ಉಸ್ತುವಾರಿ ಸಚಿವ**

ಜಿಲ್ಲೆಯಲ್ಲಿ ವಾಡಿಕೆ ಮಳೆಗಿಂತ ಶೇ.32ರಷ್ಟು ಮಳೆ ಕೊರತೆಯಾಗಿದ್ದು, ಸುಮಾರು ಶೇ.80ರಷ್ಟು ಬೆಳೆಗಳು ಹಾನಿಗೊಳಗಾಗಿವೆ. ಪ್ರಾಥಮಿಕ ಅಂದಾಜಿನಂತೆ ₹218 ಕೋಟಿ ಮೌಲ್ಯದ ಬೆಳೆ ನಷ್ಟವಾಗಿದೆ ಎಂದು ಉನ್ನತ ಶಿಕ್ಷಣ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ತಿಳಿಸಿದರು.

ಗದಗ ಜಿಲ್ಲಾ ಕ್ರೀಡಾಂಗಣದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ಉಂಟಾಗಿರುವ ಪರಿಸ್ಥಿತಿಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಲಹೆಯಂತೆ ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯ ಏಳು ತಾಲೂಕುಗಳಲ್ಲಿ ಸಭೆ ನಡೆಸಿ ಬರ ಪರಿಸ್ಥಿತಿಯನ್ನು ಪರಿಶೀಲಿಸಲಾಗಿದೆ ಎಂದರು.

**ನಾಲ್ಕು ಕ್ಷೇತ್ರಗಳಲ್ಲಿ ಬರ ಪರಿಸ್ಥಿತಿ ಅಧ್ಯಯನ**

ನರಗುಂದ ಹೊರತುಪಡಿಸಿ ಬಹುತೇಕ ತಾಲೂಕುಗಳಲ್ಲಿ ಮಳೆ ಕೊರತೆಯಾಗಿದೆ. ನರಗುಂದದಲ್ಲಿ ಜೂನ್‌ನಲ್ಲಿ ಹೆಚ್ಚಿನ ಪ್ರಮಾಣದ ಮಳೆಯಾಗಿದ್ದರೂ, ಅಲ್ಲಿಯೂ ಬರ ಪರಿಸ್ಥಿತಿ ಕಂಡುಬಂದಿದೆ. ಜಿಲ್ಲೆಯಲ್ಲಿ ವಾಡಿಕೆ ಮಳೆಗಿಂತ ಒಟ್ಟಾರೆ ಶೇ.32ರಷ್ಟು ಮಳೆ ಕೊರತೆಯಾಗಿದೆ ಎಂದು ಹೇಳಿದರು.

ಆಗಸ್ಟ್ 11ರಂದು ಜಿಲ್ಲಾಧಿಕಾರಿ ಹಾಗೂ ಕೃಷಿ ಇಲಾಖೆ ಅಧಿಕಾರಿಗಳು ಬೆಂಗಳೂರಿಗೆ ತೆರಳಿ ಬೆಳೆ ಹಾನಿಯ ಕುರಿತು ಸಮಗ್ರ ವರದಿ ಸಲ್ಲಿಸಿದ್ದಾರೆ. ಪ್ರಾಥಮಿಕ ವರದಿಯಂತೆ ಜಿಲ್ಲೆಯಲ್ಲಿ ₹218 ಕೋಟಿ ಮೌಲ್ಯದ ಬೆಳೆ ನಷ್ಟವಾಗಿರುವುದು ಅಂದಾಜಿಸಲಾಗಿದೆ ಎಂದು ತಿಳಿಸಿದರು.

**125 ದಿನ ಉದ್ಯೋಗಕ್ಕೆ ಒತ್ತು**

ಬರ ಪರಿಸ್ಥಿತಿಯಿಂದ ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗದ ಅವಶ್ಯಕತೆ ಹೆಚ್ಚಾಗಿದೆ. ಹೊಸ ಖಾತ್ರಿ ಕಾಯ್ದೆಯಡಿ ಪ್ರತಿ ಕೆಲಸಗಾರರಿಗೆ 125 ದಿನಗಳವರೆಗೆ ಉದ್ಯೋಗ ಒದಗಿಸಲು ಅವಕಾಶವಿದ್ದು, ಶೀಘ್ರದಲ್ಲೇ ಮಾನವ ಸಂಪನ್ಮೂಲ ಆಧಾರಿತ ಕಾಮಗಾರಿಗಳನ್ನು ಆರಂಭಿಸಲಾಗುವುದು ಎಂದರು.

ಪ್ರತಿ ಜಿಲ್ಲೆಗೆ ₹500 ಕೋಟಿಗೂ ಅಧಿಕ ಅನುದಾನದ ಅಗತ್ಯವಿದೆ. ರಾಜ್ಯದ 180ಕ್ಕೂ ಹೆಚ್ಚು ಜಿಲ್ಲೆಗಳು ಬರ ಪರಿಸ್ಥಿತಿಗೆ ತುತ್ತಾಗಿವೆ ಎಂದು ಸಚಿವರು ಹೇಳಿದರು.

**ಕೇಂದ್ರದ ನೆರವಿಗೆ ಮನವಿ**

ಬರ ಪರಿಸ್ಥಿತಿ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಿ ಕೇಂದ್ರ ಸರ್ಕಾರಕ್ಕೆ ವಾಸ್ತವಾಂಶಗಳನ್ನು ಮನವರಿಕೆ ಮಾಡಿಕೊಡಲಾಗುವುದು. ಕೇವಲ ರಾಜ್ಯ ಸರ್ಕಾರದಿಂದಲೇ ಬರ ಪರಿಸ್ಥಿತಿ ಎದುರಿಸುವುದು ಕಷ್ಟಸಾಧ್ಯವಾಗಿದ್ದು, ಕೇಂದ್ರದಿಂದ ಅಗತ್ಯ ಆರ್ಥಿಕ ನೆರವು ಕೋರಲಾಗುವುದು ಎಂದರು.

ರಾಜ್ಯದಿಂದ ಕೇಂದ್ರ ಸರ್ಕಾರಕ್ಕೆ ದೊಡ್ಡ ಪ್ರಮಾಣದಲ್ಲಿ ತೆರಿಗೆ ಹಣ ಹೋಗುತ್ತಿದೆ. ಸಂಕಷ್ಟದ ಸಂದರ್ಭದಲ್ಲಿ ಕೇಂದ್ರ ಸರ್ಕಾರ ರಾಜ್ಯಕ್ಕೆ ಅಗತ್ಯ ನೆರವು ನೀಡಬೇಕು ಎಂದು ಬಸವರಾಜ ರಾಯರಡ್ಡಿ ಒತ್ತಾಯಿಸಿದರು.

**ಅಭಿವೃದ್ಧಿಗೆ ಚುನಾಯಿತ ಪ್ರತಿನಿಧಿಗಳ ಸಲಹೆ**

ಜಿಲ್ಲೆಯ ಆಡಳಿತ ಸುಗಮವಾಗಿ ನಡೆಯಲು ಹಾಗೂ ಸರ್ಕಾರದ ಕಾರ್ಯಕ್ರಮಗಳು ಮತ್ತು ಅಭಿವೃದ್ಧಿ ಕಾಮಗಾರಿಗಳು ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳಲು ಜಿಲ್ಲಾ ಉಸ್ತುವಾರಿ ಸಚಿವರನ್ನು ನೇಮಕ ಮಾಡಲಾಗುತ್ತದೆ. ಜಿಲ್ಲೆಯ ಸಮಸ್ಯೆಗಳನ್ನು ಆಲಿಸಿ, ಸಂಬಂಧಿಸಿದ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಪರಿಹಾರ ಕಲ್ಪಿಸುವುದು ಉಸ್ತುವಾರಿ ಸಚಿವರ ಕರ್ತವ್ಯವಾಗಿದೆ ಎಂದರು.

ಗದಗ ಜಿಲ್ಲೆಯಲ್ಲಿ ಅನುಭವ ಹೊಂದಿರುವ ಚುನಾಯಿತ ಪ್ರತಿನಿಧಿಗಳಿದ್ದು, ಅವರ ಸಲಹೆ ಹಾಗೂ ವಿಚಾರಗಳನ್ನು ಪಡೆದುಕೊಂಡು ಜಿಲ್ಲೆಯ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸಲಾಗುವುದು ಎಂದು ಹೇಳಿದರು.

ಸ್ವಾತಂತ್ರ್ಯ ಹೋರಾಟದಲ್ಲಿ ಗದಗ ಜಿಲ್ಲೆಯ ಪಾತ್ರ ಮಹತ್ವದ್ದಾಗಿದೆ. 1947ರ ಆಗಸ್ಟ್ 15ರಂದು ಬ್ರಿಟಿಷರ ಆಡಳಿತ ಅಂತ್ಯಗೊಂಡು ದೇಶದಲ್ಲಿ ಪ್ರಜಾಪ್ರಭುತ್ವದ ಆಡಳಿತ ವ್ಯವಸ್ಥೆ ಜಾರಿಗೆ ಬಂದಿದ್ದು, ಅಂದಿನಿಂದ ಜಾತಿ, ಧರ್ಮ ಹಾಗೂ ಪಕ್ಷಭೇದ ಮರೆತು ದೇಶಾದ್ಯಂತ ಸ್ವಾತಂತ್ರ್ಯೋತ್ಸವ ಆಚರಿಸಲಾಗುತ್ತಿದೆ ಎಂದರು. 2023ರ ಮೇ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ 136ಕ್ಕೂ ಅಧಿಕ ಸ್ಥಾನಗಳನ್ನು ಗೆದ್ದು ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದರು.

ಸರ್ಕಾರ ಜನಪರ ಹಾಗೂ ಉತ್ತಮ ಆಡಳಿತ ನೀಡಿದ್ದು, ಉಳಿದ ಅವಧಿಯಲ್ಲಿಯೂ ಜನಪರ ಕಾರ್ಯಕ್ರಮಗಳನ್ನು ಮುಂದುವರಿಸಲಾಗುವುದು.

ಪ್ರಸ್ತುತ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದಲ್ಲಿಯೂ ಸರ್ಕಾರ ಅಭಿವೃದ್ಧಿ ಹಾಗೂ ಜನಪರ ಆಡಳಿತಕ್ಕೆ ಆದ್ಯತೆ ನೀಡುತ್ತಿದೆ ಎಂದು ಹೇಳಿದರು.

ವಿಧಾನ ಪರಿಷತ್ ಶಾಸಕ ಎಸ್.ವಿ. ಸಂಕನೂರ, ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಎಸ್ಪಿ ರೋಹನ್ ಜಗದೀಶ್, ಡಿಸಿಎಫ್ ಸಂತೋಷ ಕುಮಾರ, ಎಡಿಸಿ ಡಾ. ದುರಗೇಶ್ ಕೆ.ಆರ್., ಜಿಪಂ ಡಿಎಸ್‌ಸಿ ಆರ್. ಮುಂಡರಗಿ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರ ಹಾಗೂ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka